# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 105 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 09–11–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 105 | RNI No: KARKAN/2023/88462 | Chitradurga | Date: 09-11-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಆಧುನಿಕ ಭಾರತ ನಿರ್ಮಾಣದವರಗೂ ನಿರಂತರವಾಗಿ ಶ್ರಮಿಸಿ: ಸಿಎಂ 2

ಸರ್ಕಾರ ನೀತಿ ನಿರೂಪಣೆಗೆ ಸಾಂಖ್ಯಿಕ ಇಲಾಖೆ ದತ್ತಾಂಶಗಳೇ ಆಧಾರ: ಸಿಇಓ 3

ಕುಡಿದುಬಂದ ವಾರ್ಡನ್ ವಿರುದ್ಧ ವಿದ್ಯಾರ್ಥಿಗಳ ಆಕ್ರೋಶ 4



ಸುದ್ದಿ, ಜಾಹಿರಾತಿಗೆ 9686622252


# ನಮ್ಮ ತಂದೆ ನನಗೆ ಪ್ರೇರಣೆ: ಬಿವೈವಿ

» **ಹೊಸದುರ್ಗ**

ರಾಜಕೀಯ ಹೇಳು ಬೀಳು ಕಂಡಿರುವ ನಮ್ಮ ತಂದೆ ಎಲ್ಲಾ ಸವಾಲುಗಳನ್ನು ಎದುರಿಸಿ ರಾಜ್ಯದ ಇತಿಹಾಸದಲ್ಲಿ ಅಚ್ಚಳಿಯದೇ ಉಳಿದಿದ್ದಾರೆ ಯಡಿಯೂರಪ್ಪನವರನ್ನ ಪ್ರೀತಿಯಿಂದ ಜನ ಇಂದಿಗೂ ಅತ್ಯಂತ ಪ್ರೀತಿಯಿಂದ ಗೌರವಿಸುತ್ತಿದ್ದಾರೆ. ವಿರೋಧ ಪಕ್ಷದ ನಾಯಕನಾಗಿ ರಾಜ್ಯದ ಮುಖ್ಯಮಂತ್ರಿಯಾಗಿ ಜನರ ಪ್ರೀತಿ ವಿಶ್ವಾಸಗಳಿಸಿ ನನಗೆ ಪ್ರೇರಣೆಯಾಗಿದ್ದಾರೆ ಅವರು ಕೇವಲ ನನ್ನ ತಂದೆಯಾಗದೆ ನನ್ನ ರಾಜಕೀಯ ಗುರುಗಳೂ ಆಗಿದ್ದಾರೆ. ರಾಜಕೀಯದಲ್ಲಿ ಇನ್ನೂ ಅಂಬೆಗಾಲು ಇಡುತ್ತಿರುವ ನನಗೆ ನಮ್ಮ ತಂದೆ ಯಡಿಯೂರಪ್ಪನವರೇ ಆದರ್ಶ,ಅವರು ಹಾಕಿಕೊಟ್ಟ ದಾರಿಯಲ್ಲಿ ನಾನು ಬದುಕಿನಲ್ಲಿ ಮುನ್ನಡೆಯುತ್ತೇನೆ ನಾನು ಯಡಿಯೂರಪ್ಪನವರ ಮಗ ಎಂಬ ಹೆಮ್ಮೆ ನನಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ತಿಳುಸಿದರು.

ತಾಲೂಕಿನ ಸಾಣೆಹಳ್ಳಿಯ ರಾತ್ರಿಯ ನಾಟಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸಾಣೆಹಳ್ಳಿಯ ಎಲ್ಲಾ ಕಾರ್ಯಕ್ರಮಗಳು ಸಮಯಕ್ಕೆ ಸರಿಯಾಗಿ ಶಿಸ್ತುಬದ್ಧವಾಗಿ ನಡೆಯುತ್ತವೆ ಶಿಕ್ಷಣ ರಾಜಕೀಯ ಸಾಮಾಜಿಕ ಸಾಹಿತ್ಯ ಈ ಎಲ್ಲಾ ಕ್ಷೇತ್ರದಲ್ಲಿಯೂ ಕನ್ನಡ ನಾಡು ಅಗ್ರಸಾಧನೆ ಮಾಡಿದೆ, ಕಾರಣ ಕನ್ನಡ ನಾಡಿನ ಮಠಮಾನ್ಯಗಳು, ತನ್ನ ಶಿಕ್ಷಣ ಸಾಮಾಜಿಕ ಧಾರ್ಮಿಕ ಅಭಿಯಾನದ ಮುಖಾಂತರ ಸರ್ಕಾರಗಳು ಮಾಡದ ಸಮಾಜಮುಖಿ ಕಾರ್ಯಗಳನ್ನ ಮಾಡುತ್ತಿವೆ. ಇದರ ಪರಿಣಾಮವಾಗಿ ಎಲ್ಲಾ ಕ್ಷೇತ್ರದಲ್ಲಿ ಕರ್ನಾಟಕ ಅತ್ಯುತ್ತಮ ಸಾಧಕರನ್ನು ನೋಡುತ್ತಿದೆ. ನಾವು ಬೆಳೆದು ದೊಡ್ಡವರಾದಷ್ಟು ಕೂಡ ಜಾತಿಯತೆಯ ವಿಷ ಬೀಜಾ ಹುಟ್ಟುತ್ತದೆ. ನಮ್ಮ ಎದುರಿಗೆ ಬಂದವರನ್ನು ಪ್ರೀತಿಯಿಂದ ನೋಡದೆ ಜಾತಿಯಿಂದ ನೋಡುವಂತ ಪರಿಸ್ಥಿತಿ ಬಂದಿದೆ. ಜಾತಿ ಎಂಬ ವಿಷ ಬೀಜ ಹೆಮ್ಮರವಾಗಿ ಬೆಳೆದಿದೆ. ಎಲ್ಲರಲ್ಲಿಯೂ ದ್ವೇಷ ಅಸೂಯೆ ಹೆಚ್ಚಿದೆ.

ಸಮಾನ ಸಮಾಜದ ನಡುವೆ ವಿಷಬೀಜ ಬಿತ್ತುವರು ಮನುಷ್ಯರಾಗಿ ನಾವು ಮನುಷ್ಯತ್ವವನ್ನೇ ಮರೆತಿದ್ದಾರೆ ಇಂತಹ ಕಲುಷಿತ ವಾತಾವರಣದಲ್ಲಿ ನಾವು ಇದ್ದೇವೆ.ನಮ್ಮ ಮಕ್ಕಳ ಶಿಕ್ಷಣದ ಜೊತೆಗೆ ಸಂಸ್ಕೃತಿಯನ್ನ ಕೊಡಲಾಗುತ್ತಿಲ್ಲ ಇದರಲ್ಲಿ ನಾವು ಸಂಪೂರ್ಣವಾಗಿ ಎಡದಿದ್ದೇವೆ.ಸಮಾಜಕ್ಕೆ ಸಂಸ್ಕಾರ ನೀಡಿ ಸರಿದಾರಿಗೆ ನಡೆಸುವ ಜವಾಬ್ದಾರಿ ಮಠಮಾನ್ಯಗಳ ಜೊತೆ ನಮಗೂ ಇರಬೇಕು ಎಂದರು.

ಸಾಣೆಹಳ್ಳಿಯ ರಂಗ ಜಂಗಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ ಕರ್ನಾಟಕದ ರಾಜಕಾರಣದಲ್ಲಿ ಯಡಿಯೂರಪ್ಪನವರ ಏನು ಎಂಬುದು ಎಲ್ಲರಿಗೂ ಗೊತ್ತಿದೆ.ನಾವು ಒಬ್ಬರನ್ನ ದೂರುವ ಬದಲು ಅವರ ಬಗ್ಗೆ ಒಳ್ಳೆಯ ಮಾತುಗಳನ್ನು ಆಡುತ್ತಾ ಒಳ್ಳೆಯ ಕೆಲಸ ಮಾಡುತ್ತಾ ಹೋದರೆ ಸಮಾಜ ಎಂದೆಂದಿಗೂ ಮೆಚ್ಚುತ್ತದೆ ಎಂಬ ಅರಿವು ರಾಜಕೀಯ ವ್ಯಕ್ತಿಗಳಲ್ಲಿ ಬಂದಾಗ ಸಮಾಜ ನಿಮ್ಮನ್ನು ಒಪ್ಪಿಕೊಳ್ಳುವುದು ಅಪ್ಪಿಕೊಳ್ಳುವುದು

ಈ ಬಾರಿಯ ನಮ್ಮ ರಾಷ್ಟ್ರೀಯ ನಾಟಕೋತ್ಸವಕ್ಕೆ ಬಹುತೇಕ ರಾಜಕಾರಣಿಗಳು ಬಂದಿಲ್ಲ ಆದರೂ ವಿಜಯೇಂದ್ರ ಬಂದಿರುವುದು ತುಂಬಾ ಸಂತೋಷ ತಂದಿದೆ.ಒಂದು ಕಾರ್ಯಕ್ರಮಕ್ಕೆ ಒಪ್ಪಿಕೊಂಡರೆ ಅಲ್ಲಿ ಹೆಣ ಬಿದ್ದರೂ ಬರುವುದು ಅವರ ಜವಾಬ್ದಾರಿಯಾಗಿರಬೇಕು ನೆಪ ಹೇಳಿ ತಪ್ಪಿಸಿಕೊಳ್ಳುವುದು ಒಳ್ಳೆಯ ಲಕ್ಷಣವಲ್ಲ. ಈ ಮಾತನ್ನು ಉಪನ್ಯಾಸಕರು,ಸ್ವಾಮಿಗಳು ರಾಜಕಾರಣಿಗಳಿಗೂ ಹೇಳುತ್ತೇನೆ. ನಾನು ಒಂದು ಕಾರ್ಯಕ್ರಮಕ್ಕೆ ಒಪ್ಪಿಕೊಂಡರೆ ಏನೇ ತೊಂದರೆ ಆದರೂ ಆ ಕಾರ್ಯಕ್ರಮಕ್ಕೆ ಹೋಗಿಯೇತೀರುತ್ತೇನೆ ಈ ನಿಷ್ಠೆ ಎಲ್ಲರಿಗೂ ಇರಬೇಕಲ್ಲವೇ. ಹೊತ್ತು ಬಂದಂತೆ ಕೊಡೆಯುವ ಹಿಡಿಯುವ ಪ್ರವೃತ್ತಿ ಇರಬಾರದು ಎಂದರು.

ಚಿತ್ರದುರ್ಗ ಮಾದರ ಚೆನ್ನಯ್ಯ ಗುರು ಪೀಠದ ಶ್ರೀ ಮಾದರ ಚೆನ್ನಯ್ಯ ಸ್ವಾಮೀಜಿ ಮಾತನಾಡಿ ನಾವು ಧರ್ಮ ಪ್ರಸ್ತುತ ಯುಗದಲ್ಲಿ ಧರ್ಮ ಧರ್ಮಗಳ ನಡುವೆ ಸ್ಪರ್ಧೆ ನಡೆಯುತ್ತಿದೆ ವಾಣಿಜ್ಯ ಉದ್ಯಮ ಎಲ್ಲ ವಲಯಗಳನ್ನು ಸ್ಪರ್ಧೆ ನಡೆಯುವ ಸಂದರ್ಭದಲ್ಲಿ ನಮ್ಮ ಭಾಷೆಯನ್ನು ಉಳಿಸಿಕೊಳ್ಳುವುದು ಅನಿವಾರ್ಯವಾಗಿದೆ. ಸ್ವತಂತ್ರ ಪೂರ್ವದಲ್ಲಿ ಧಾರವಾಡ, ಬಳ್ಳಾರಿ ಪ್ರಾಂತ್ಯವಾಗಿ ಹರಿದು ಹಂಚಿದ್ದ ಕನ್ನಡ ನಾಡು ಹರಿದು ಹಂಚಿಹೋಗಿತ್ತು ಕನ್ನಡ ನಾಡನ್ನು ಉಳಿಸಲು ಅಂದೇ ಬ್ರಿಟಿಷಧಿಕಾರಿಗಳು ಶ್ರಮಿಸಿದ್ದರು. ಪ್ರಸ್ತುತ ಧರ್ಮ ಮತ್ತು ಗ್ರಂಥಗಳ ಆಧಾರದ ಮೇಲೆ ತೆರೆಯುತ್ತಿದ್ದೇವೆ. ಕಯ್ಯಾರ ಕಿನ್ನಣ್ಣರೈ ರವರ ಕಾಸರಗೋಡು ಕನ್ನಡ ನಾಡಾಗಿ ಉಳಿಯಲಿಲ್ಲ. ಕನ್ನಡ ನಾಡಿಗೆ ಚಿಕ್ಕ ಎಂಟು ಜ್ಞಾನಪೀಠ ಪ್ರಶಸ್ತಿಗಳು ಅಕ್ಕ ಪಕ್ಕದ ಯಾವುದೇ ಭಾಷೆಗಳಿಗೂ ಸಿಕ್ಕಿಲ್ಲ. ಕಲ್ಯಾಣ ಕರ್ನಾಟಕ ನಿನ್ನ ರಾಜಕಾರಣಿಗಳು ಮುಗ್ಧ ಕನ್ನಡಿಗರನ್ನು ಮುಗ್ಧ ಜನರನ್ನು ಎತ್ತಿ ಕಟ್ಟಿ ಪ್ರತ್ಯೇಕ ರಾಜ್ಯದ ಕೂಗು ಹಾಕುತ್ತಿದ್ದಾರೆ. ತುಳು ಭಾಷಿಕರು ತುಳುನಾಡನ್ನು ಬೇರೆ ಮಾಡಿಕೊಡಿ ಎಂಬ ಗೂಗನ್ನು ಅಲ್ಲಿಯ ರಾಜಕಾರಣಿಗಳು ಎಬ್ಬಿಸಿದ್ದಾರೆ. ನಮ್ಮ ನಾಡುನುಡಿಗೆ ತ್ಯಾಗ ಬಲಿದಾನ ಮಾಡಿದವರಿಗೆ ಮಸಿ ಬಳಿಯುವ ಕೆಲಸ ಮಾಡಬಾರದು ಧರ್ಮಗಳ ಹೆಸರಲ್ಲಿ ಅವರವರ ಭಾಷೆಗಳಲ್ಲಿ ಶಿಕ್ಷಣ ನೀಡುವುದು ಮುಂದಿನ ನಮ್ಮ ಮಾತೃಭಾಷೆ ಕನ್ನಡ ಉಳುವಿಗೆ ಕಂಟಕವಾಗಬಹುದು ಎಂದರು.

ಶಿಕ್ಷಣದಲ್ಲಿ ಮಾತೃಭಾಷೆಯ ಮಹತ್ವ ಕುರಿತು ಭಾಷಾ ವಿಜ್ಞಾನಿ, ಶಿಕ್ಷಣ ತಜ್ಞ,ಪ್ರೊಫೆಸರ್, ಅಬ್ದುಲ್ ರೆಹಮಾನ್ ಪಾಷಾ ಮಾತನಾಡಿ ಯಾಕೆವರ್ಷವಾದರೂ ಶಿಕ್ಷಣದಲ್ಲಿ ಮಾತೃಭಾಷೆ ಕುರಿತು ಮಾತನಾಡುವ ಪರಿಸ್ಥಿತಿ ಬಂದಿರುವುದು ದುರಂತ, ಮನುಷ್ಯ ಮನುಷ್ಯನಾಗಿ ಮಾಡಿಕೊಳ್ಳುವ ಒಂದು ಕ್ರಿಯೆಯೆ ಶಿಕ್ಷಣ, ಅನೇಕ ಭಾಷೆ ಸಂಸ್ಕೃತಿ ನಡೆ–ನುಡಿ ಹಬ್ಬ ಹರಿದಿನಗಳಲ್ಲಿ ಬಹುತ್ವ ಹೊಂದಿರುವ ಭಾರತ, ಈ ಎಲ್ಲಾ ಬಹುತ್ವದ ನಾಡು ಕರ್ನಾಟಕವೂ ಕೂಡ ಆಗಿದೆ, ಮೂಲಭೂತ ಕ್ಷಣದಲ್ಲಿ ಮಾತೃಭಾಷೆಯ ಮಹತ್ವ ಏನು ಎಂಬುದನ್ನು ಅರಿತಾಗ ಒಂದು ಮಗು ಹುಟ್ಟಿದಾಗ ಎಲ್ಲವನ್ನೂ ಅಮ್ಮನಿಂದಲೇ ಮಾತೃಭಾಷೆ ಸಂವಹನವನ್ನು ಪಡೆಯುತ್ತಾ ಹೋಗುತ್ತದೆ. ನಂತರ ಒಮ್ಮೆ ದೊಡ್ಡವರ ಭಾಷೆಯನ್ನು ಮಾತನಾಡಲು ಪ್ರಾರಂಭಿಸಿದ ಆ ಮಗು ತಂದೆ ತಾಯಿ ಆಡುವ ಭಾಷೆಯನ್ನೇ ಮಾತನಾಡಲಾರಂಭಿಸುತ್ತದೆ ಮುಂದೆ ಆ ಮಗುವಿಗೆ ಆ ಭಾಷೆ ಮಾತೃಭಾಷೆಯಾಗುತ್ತದೆ. ಮಗುವಿಗೆ ಭಾಷೆಯನ್ನ ಯಾರು ಕಲಿಸುವುದಿಲ್ಲ ಮಾತೃಭಾಷೆಯನ್ನು ಅರ್ಥ ಮಾಡಿಕೊಂಡು ಮಾತನಾಡುವ ಶಕ್ತಿಯನ್ನು ಗಳಿಸಿಕೊಳ್ಳುತ್ತದೆ

ಬುನಾದಿಯೇ ಇಲ್ಲದ ಇಂಗ್ಲಿಷ್ ಭಾಷೆಯ ಮೇಲೆ ಮನೆ ಕಟ್ಟಲು ಹೋಗುತ್ತಿದ್ದೇವೆ ಈ ಭಾಷೆಯಲ್ಲಿ ಶಿಕ್ಷಣ ಕೊಡುತ್ತೇವೆ ಎಂದು ಹೊರಟಿದ್ದಾರೆ. ಕೇವಲ ಮಾತೃಭಾಷೆಯಲ್ಲಿ ಪ್ರಾಥಮಿಕ ಶಿಕ್ಷಣವನ್ನ ಆ ಮಗು ಮುಗಿಸಿದಾಗ ಮುಂದಿನ ವ್ಯಕ್ತಿತ್ವ ವಿಕಸನಕ್ಕೆ ದಾರಿಯಾಗುತ್ತದೆ ಎಂದರು. ಉರ್ದು ಮಾಧ್ಯಮ ಶಾಲೆ ನಮ್ಮ ಊರಲ್ಲಿ ಉರ್ದು ಶಾಲೆ ಇರದ ಕಾರಣ ನನ್ನನ್ನ ಕನ್ನಡ ಮಾಧ್ಯಮ ಶಾಲೆಗೆ ನಮ್ಮ ತಂದೆ ತಾಯಿ ಸೇರಿಸಿದರು. ನನಗೆ ಎಲ್ಲಾ ಅವಕಾಶವಿದ್ದರೂ ನಾನು ನನ್ನ ಮಕ್ಕಳನ್ನ ಕನ್ನಡ ಮಾಧ್ಯಮ ಶಾಲೆಯಲ್ಲಿ ಬಾಲ್ಯದ ಶಿಕ್ಷಣವನ್ನು ಕೊಡಿಸಿದೆನು. ಆದರೆ ಮಾತೃಭಾಷೆ ಶಿಕ್ಷಣದ ಮಾಧ್ಯಮವಾಗಿ ಬೆಳೆಯಲು ಕೊರತೆಯಾಗಬಹುದು ಮಾತ್ರ ಭಾಷೆಯ ಬುನಾದಿ ಚೆನ್ನಾಗಿ ಬಿದ್ದರೆ ಇದರ ಆಧಾರದ ಮೇಲೆ ಆ ಮಗು ಎಲ್ಲ ಭಾಷೆಯನ್ನು ಮುಂದೆ ಸಮರ್ಥವಾಗಿ ಎದುರಿಸಬಲ್ಲದು ಎಂದರು.

ಚಲನಚಿತ್ರ ಕ್ಷೇತ್ರಗಳಲ್ಲಿ ಸಾಣಿಹಳ್ಳಿಯ ರಂಗಶಾಲೆಯಲ್ಲಿ ಕಲಿತ ನಟರು ಹೆಚ್ಚು ಹೆಚ್ಚು ಹೆಸರಾಗಿದ್ದಾರೆ. ಎಂದು ಚಿತ್ರ ನಟ ಧರ್ಮ ಹೇಳಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗದ ಮಾದರ ಚೆನ್ನಯ್ಯ ಸ್ವಾಮೀಜಿ, ಹಿರಿಯೂರು ಶಾಸಕ ಜಿಎಚ್ ಶ್ರೀನಿವಾಸ,ವಿಮಾನಯಾನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹನುಮಲಿ ಷಣ್ಮುಖಪ್ಪ, ಕವಿಯತ್ರಿ ಇಂದುಮತಿ ಸಾಲಿಮಠ, ಚಿತ್ರದುರ್ಗ ಎಸ್ ಪಿ ರಂಜಿತ್ ಕುಮಾರ್ ಬಂಢಾರು ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಕೆಜಿ ಮಹಾಬಲೇಶ್ವರ, ಗೋಡು, ಲಕ್ಷ್ಮಿದೇವಮ್ಮ ಮುಗಳಿ, ಓಬಳೇಶ್, ರವರನ್ನು ಸನ್ಮಾನಿಸಲಾಯಿತು. ಹಂಸಪ್ರಿಯ ನೃತ್ಯಾನಿಕೇತನ ಕಲಾ ಶಿಕ್ಷಣ ಟ್ರಸ್ಟ್ ಕೊಟ್ಟೂರು ರವರಿಂದ ಭರತನಾಟ್ಯ ಪ್ರದರ್ಶಿಸಲಾಯಿತು.








## ಫಾಸ್ಟ್ ನ್ಯೂಸ್

### ವಿದ್ಯಾರ್ಥಿ ನಿಲಯಗಳಿಗೆ ಉಪವಿಭಾಗಾಧಿಕಾರಿ ಭೇಟಿ, ಪರೀಶಿಲನೆ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಡಿ.ದೇವರಾಜ್ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಸೇರಿದಂತೆ ವಿವಿಧ ವಿದ್ಯಾರ್ಥಿ ನಿಲಯಗಳಿಗೆ ಗುರುವಾರ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ನೀಡುವ ಸೌಕರ್ಯಗಳು ಹಾಗೂ ಆಹಾರದ ಗುಣಮಟ್ಟ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ ಸೇರಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನಿಲಯಪಾಲಕರು ಇದ್ದರು.

### ನ.೯ರಂದು ಕಾನೂನು ಅರಿವು ನೆರವು ಕಾರ್ಯಕ್ರಮ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಹಾಗೂ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಇದೇ ನ.09 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಕಾನೂನು ಸೇವೆಗಳ ದಿನಾಚರಣೆ ಅಂಗವಾಗಿ "ಕಾನೂನು ಅರಿವು ನೆರವು ಕಾರ್ಯಕ್ರಮ" ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ರೋಣ್ ವಾಸುದೇವ್ ಉದ್ಘಾಟಿಸುವರು. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಪ್ರಾಸ್ತಾವಿಕವಾಗಿ ಮಾತನಾಡುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಕಾರ್ಯದರ್ಶಿ ಆರ್.ಗಂಗಾಧರ್, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪತ್ರಾಂಕಿತ ವ್ಯವಸ್ಥಾಪಕ ಆರ್.ವೆಂಕಟೇಶ್ ಭಾಗವಹಿಸುವರು.

ಪ್ರಧಾನ ಕಾನೂನು ಅಭಿರಕ್ಷಕ ಎಸ್. ವಿಜಯಕುಮಾರ್ "ಕಾನೂನು ಸೇವೆಗಳ ಪ್ರಾಧಿಕಾರ ಕಾಯ್ದೆ–1987" ರ ಕುರಿತು ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ಅರ್ಜಿ ಆಹ್ವಾನ

» **ದಾವಣಗೆರೆ**

ಪರಿಶಿಷ್ಟ ಜಾತಿ ವಿಶೇಷ ಘಟಕ ಮತ್ತು ಪರಿಶಿಷ್ಟ ಪಂಗಡ ಗಿರಿಜನ ಉಪ ಯೋಜನೆಯಡಿ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಲ್ಲಿ ಸಣ್ಣ ಮತ್ತು ಅತೀ ಸಣ್ಣ ಘಟಕಗಳ ಸ್ಥಾಪನೆಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗದವರು ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಹೊಸದಾಗಿ ಸ್ಥಾಪಿಸುವ ಜವಳಿ ಘಟಕಗಳಿಗೆ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಜವಳಿ ಘಟಕಗಳಿಗೆ ಶೇ.75 ರಷ್ಟು ಅಥವಾ ಗರಿಷ್ಠ ರೂ.2. ಕೋಟಿಗಳವರೆಗೆ ಸಹಾಯಧನ ಪಡೆಯಬಹುದು. ಜವಳಿ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಅವಶ್ಯವಾದ ನಿವೇಶನ, ಕಟ್ಟಡ ಹೊಂದಿರುವವರಾಗಿರಬೇಕು. ಆಸಕ್ತರು ಜವಳಿ ಉತ್ಪಾದನಾ ಉದ್ದಿಮೆದಾರರು ಅವಶ್ಯವಿರುವ ದಾಖಲಾತಿಗಳೊಂದಿಗೆ ಡಿಸೆಂಬರ್ 18 ರೊಳಗಾಗಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಕಚೇರಿಗೆ ಸಲ್ಲಿಸುವುದು, ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್ ದಾವಣಗೆರೆ ರಾಮಾಂಜನೇಯ ಪ್ಲಾಜಾ ಕಾಲೇಜ್ ರಸ್ತೆ, ನಿಟ್ಟುವಳ್ಳಿ, ದಾವಣಗೆರೆ–577004. ದೂ ಸಂಖ್ಯೆ: 08192–262362 ಸಂಪರ್ಕಿಸಲು ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಮನುಷ್ಯ ಸದಾ ಕ್ರಿಯಾಶೀಲನಾಗಿರಬೇಕು: ಸಾಣೇಹಳ್ಳಿ ಶ್ರೀ

» **ಹೊಸದುರ್ಗ**

ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳು ಬುದ್ಧಿವಂತರು. ಅವರಲ್ಲಿ ಅಪಾರ ಜ್ಞಾನಶಕ್ತಿಯಿದೆ. ಇದಕ್ಕೆ ಧಾರ್ಮಿಕ ಜಾಗೃತಿ ಹಾಗೂ ನೈತಿಕ ಶಿಕ್ಷಣವಿದ್ದರೆ ಸಂಸ್ಕಾರ ಹೊಂದಲು ಸಾಧ್ಯ ಎಂದು ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಕಿವಿಮಾತು ಹೇಳಿದರು.

ತಾಲೂಕಿನ ಸಾಣೆಹಳ್ಳಿಯಲ್ಲಿ ರಾಷ್ಟ್ರೀಯ ನಾಟಕೋತ್ಸವ ಅಂಗವಾಗಿ ಶುಕ್ರವಾರ ಏರ್ಪಡಿಸಿದ್ದ ಚಿಂತನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು ನೈತಿಕ ನೆಲೆಗಟ್ಟು ಹಾಗೂ ಧಾರ್ಮಿಕ ಜಾಗೃತಿಯಿದ್ದರೆ ಬೆಳಕಿನ ಕಡೆಗೆ ಸಾಗಲು ಸಾಧ್ಯ. ಸಮಾಜವನ್ನೂ ಬೆಳಕಿನ ಕಡೆಗೆ ಕರೆದೊಯ್ಯಲು ಸಾಧ್ಯ ಎಂದು ತಿಳಿವಳಿಕೆ ಹೇಳಿದರು.

ಚಿಂತನ ಕಾರ್ಯಕ್ರಮದಲ್ಲಿ ನಿತ್ಯ ಪ್ರಾರ್ಥನೆ, ಧ್ಯಾನ, ವಚನಗಳ ಕೇಳುವಿಕೆಯು ಯಾಂತ್ರಿಕವಲ್ಲ. ವಚನಗಳನ್ನು ಕೇಳುತ್ತ, ಮನನ ಮಾಡಿಕೊಳ್ಳುವ ಮೂಲಕ ಕ್ರಿಯಾಶೀಲರಾಗಲು ಸಾಧ್ಯವಾಗುತ್ತದೆ.

ಎಲ್ಲರ ಜವಾಬ್ದಾರಿಗಿಂತ ನಮ್ಮ ಜವಾಬ್ದಾರಿಯನ್ನು ಹೇಗೆ ನಿರ್ವಹಿಸುತ್ತೇವೆ ಎನ್ನುವುದು ಮುಖ್ಯ. ಸಾಧನೆ ಸೋಮಾರಿಗಳ ಸೊತ್ತಲ್ಲ. ಮನುಷ್ಯ ಸದಾ ಕ್ರಿಯಾಶೀಲನಾಗಿರಬೇಕು. ಜಡತ್ವ ಕಿತ್ತುಹಾಕಬೇಕು. ಮರದಡಿ ವ್ಯಕ್ತಿಯೊಬ್ಬ ಕುಳಿತು ಜನರನ್ನು ನೋಡುತ್ತಿದ್ದ. ಇಷ್ಟೊಂದು ಜನರು ಹೋಗುತ್ತಿದ್ದೀರಲ್ಲ, ಎಲ್ಲಿಗೆ ಹೋಗುತ್ತಿದ್ದೀರಿ ಎಂದು ಕೇಳಿದ. ನಾಟಕೋತ್ಸವಕ್ಕೆ ಹೋಗುತ್ತಿದ್ದೇವೆ ನಂತರ ಬಾಳೆಹಣ್ಣು ಕೊಡ್ತಾರೆ ಎನ್ನುತ್ತಾರೆ. ಬಾಳೆಹಣ್ಣು ಕೊಟ್ಟ ಮೇಲೆ ಏನು ಮಾಡುವುದು? ತಿನ್ನುವುದು. ತಿಂದ ಮೇಲೆ? ಆನಂದವಾಗಿರುವುದು. ಈಗಾಗಲೇ ನಾನು ಆನಂದವಾಗಿದ್ದೇನೆ ಎನ್ನುತ್ತಾನೆ. ಇಂಥ ಸೋಮಾರಿಗಳಾಗಬಾರದು .



ಶಿಕ್ಷಕರಾದವರು ವಿದ್ಯಾರ್ಥಿಯನ್ನ ದಡ್ಡ. ಈತನನ್ನು ಪರೀಕ್ಷೆಯಲ್ಲಿ ಏನು ಸಾಧಿಸುತ್ತಾನೆ ಎನ್ನುವ ಬದಲು ದಡ್ಡ ವಿದ್ಯಾರ್ಥಿಯನ್ನು ಜಾಗೃತಗೊಳಿಸಬೇಕು. ಕವಿದ ಮಂಕನ್ನು ತೆಗೆದುಹಾಕಬೇಕು. ಎಣ್ಣೆಯಿದ್ದು, ದೀಪವಿದ್ದು ಸರಿಯಾಗಿ ಉರಿಯದೆ ಇದ್ದಾಗ ಸರಿಪಡಿಸಿದಾಗ ಪ್ರಜ್ವಲವಾಗಿ ಉರಿಯುತ್ತದೆ. ಹೀಗೆ ವಿದ್ಯಾರ್ಥಿಗಳ ತಪ್ಪುಗಳನ್ನು ಸರಿಪಡಿಸಬೇಕು. ಶ್ರದ್ಧೆಯಿಂದ ಪಾಠವನ್ನು ಕೇಳುವಲ್ಲಿ, ಓದುವಲ್ಲಿ, ಪ್ರಶ್ನೆ ಕೇಳುವಲ್ಲಿ ಸಾಧ್ಯವಾದರೆ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ಸಾಧ್ಯ ಎಂದು ತಿಳಿಸಿದರು.

ಕಲಿಕೆಯ ಜವಾಬ್ದಾರಿ ಕುರಿತು ಹೊಳಲ್ಕೆರೆಯ ಸೀಮಾ ಬಸವರಾಜ ಪಾಟೀಲ ಮಾತನಾಡಿ, ತೇನ್ ಸಿಂಗ್ ಹಿಮಾಲಯ ಏರಲು ಪ್ರೇರಣೆ ಅವರ ತಾಯಿ. ಸಾವಿರ ಹಾಡುಗಳ ಸರದಾರ ಹುಕ್ಕೇರಿ ಬಾಳಪ್ಪ ಪ್ರಸಿದ್ಧರಾಗಿದ್ದರು. ಅವರು ಚಿಕ್ಕವರಿದ್ದಾಗ ಅವರ ತಾಯಿ ಹಾಡುತ್ತಿದ್ದ ಹಾಡುಗಳು ಪ್ರಭಾವ ಬೀರಿದವು ಎಂದರು.

ಮಕ್ಕಳಿಗೆ ಎಷ್ಟು, ಏನನ್ನು ಒದಗಿಸಬೇಕು ಎನ್ನುವುದು ಗೊತ್ತಿರಬೇಕು. ಮನೆಯೇ ಮೊದಲ ಪಾಠಶಾಲೆಯಾಗಿರುವುದರಿಂದ ನಡೆ–ನುಡಿ ಒಂದಾಗಿರಬೇಕು. ವಿದ್ಯಾರ್ಥಿಗಳಿಗೆ ಮುಂದೆ ನೀವು ಏನಾಗಬೇಕು ಎಂದು ಪ್ರಬಂಧ ಬರೆಯಲು ಕೇಳಿದ ಬಾಲಕನೊಬ್ಬ ಮೊಬೈಲ್ ಫೋನ್ ಆಗಲು ಬಯಸುವೆ ಎಂದು ಬರೆದಿದ್ದ. ಏಕೆಂದರೆ ತನ್ನ ತಂದೆ, ತಾಯಿ, ಅಜ್ಜ ಎಲ್ಲರೂ ಮೊಬೈಲ್ ಫೋನ್ ಹಿಡಿದುಕೊಂಡು ಇರುತ್ತಾರೆ. ನನ್ನೊಂದಿಗೆ ಬೆರೆಯಲ್ಲ ಎಂದು ಉತ್ತರಿಸಿದ್ದ ಎಂದು ಹೇಳಿದರು.

ಒತ್ತಡ ಹೇರುವ ಸರ್ಕಾರವಾಗಬಾರದು ತಂದೆ. ಆಪ್ತಮಿತ್ರನಾಗಬೇಕು. ಏನು ಕಲಿತ? ಹೇಗೆ ಕಲಿತ ಎಂದು ಕೇಳದೆ ಯಾರು ಕಲಿಸಿದ್ದು ಎಂದು ಹೆತ್ತವರು ಬೈಯ್ಯುತ್ತಾರೆ. ಅಂಕಗಳು ಕಡಿಮೆಯಾದಾಗ ಹೆತ್ತವರು ಬೈದರೆ ಆತ್ಮಹತ್ಯೆ ಮಾಡಿಕೊಳ್ಳುವುದು ಒಂದೇ ದಾರಿಯೆಂದು ತಿಳಿಯಬೇಕಿಲ್ಲ ಎಂದರು.

## ಫಾಸ್ಟ್ ನ್ಯೂಸ್

### ಅರಿವು ಶೈಕ್ಷಣಿಕ ಸಾಲ ಯೋಜನೆ : ಅರ್ಜಿ ಆಹ್ವಾನ

» ಚಿತ್ರದುರ್ಗ

ಕರ್ನಾಟಕ ಆರ್ಯವೈಶ್ಯ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಸಾಲ ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಆನ್‍ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಡಿಸೆಂಬರ್ 15 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.ಅರಿವು ಶೈಕ್ಷಣಿಕ ಸಾಲ ಯೋಜನೆಗೆ ಅರ್ಜಿ ಸಲ್ಲಿಸುವವರು ಸಿ.ಇ.ಟಿ, ಎನ್.ಇ.ಇ.ಟಿ(ನೀಟ್) ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸು ಹಾಗೂ ಪಿ.ಹೆಚ್.ಡಿಯಲ್ಲಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ. 1.00 ಲಕ್ಷ ಸಾಲವನ್ನು ಶೇ.2ರ ಬಡ್ಡಿ ದರದಲ್ಲಿ ಶೈಕ್ಷಣಿಕ ಸಾಲ ನೀಡಲಾಗುತ್ತದೆ. ವ್ಯಾಸಂಗ ಪೂರ್ಣಗೊಂಡ 04 ತಿಂಗಳ ವಿರಾಮಾವಧಿ ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರು ಪಾವತಿಸಬೇಕು. ಅರ್ಜಿದಾರರು 18–35 ವರ್ಷದೊಳಗಿನವರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ. 6.00 ಲಕ್ಷ ಮಿತಿಯೊಳಗಿರುವ ಅರ್ಹ ಅಭ್ಯರ್ಥಿಗಳು kacdc.karnataka.gov.in ನ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆಗಳು: ಅರ್ಜಿದಾರನು ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದವರಾಗಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ–ಜಿ ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರ ಚಾಲ್ತಿಯಲ್ಲಿರಬೇಕು). ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಖಾಯಂ ವಿಳಾಸವು ರಾಜ್ಯದಲ್ಲಿರಬೇಕು. ಅರ್ಜಿದಾರನು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.5 ರಷ್ಟು ಮೀಸಲಾತಿ ಇರಿಸಿದೆ. ಒಂದು ಕುಟುಂಬದಲ್ಲಿ ಇಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ ಸಂಖ್ಯೆ 9448451111 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

### ನ.11ರಂದು ವೀರ ವನಿತೆ ಒನಕೆ ಓಬವ್ವ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಇದೇ ನ.11ರಂದು ಬೆಳಿಗ್ಗೆ 11 ಗಂಟೆಗೆ ನಗರದ ತ.ರಾ.ಸು ರಂಗಮಂದಿರದಲ್ಲಿ ವೀರ ವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಸಮಾರಂಭ ಆಯೋಜಿಸಲಾಗಿದೆ. ಛಲವಾದಿ ಮಹಾಸಂಸ್ಥಾನ ಗುರುಪೀಠ ಟ್ರಸ್ಟ್‍ನ ಬಸವ ನಾಗಿದೇವ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು. ಸಂಸದ ಗೋವಿಂದ ಎಂ ಕಾರಜೋಳ ಉಪಸ್ಥಿತರಿರುವರು. ಶಾಸಕಕೆ.ಸಿ.ವೀರೇಂದ್ರ(ಪಪ್ಪಿ)ಅಧ್ಯಕ್ಷತೆವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಹಾಗೂ ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‍ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್ ರಾಘವೇಂದ್ರ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಒನಕೆ ಓಬವ್ವ ಸಮಾಜದ ಸಮಸ್ತ ಗೌರವಾನ್ವಿತ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಉಪನ್ಯಾಸಕ ಡಾ.ತಿಪ್ಪೇಸ್ವಾಮಿ ಮತ್ತಮುದ್ರ ಉಪನ್ಯಾಸ ನೀಡುವರು. ಚಿತ್ರದುರ್ಗದ ಉಮೇಶ್ ಪತ್ತಾರ್ ಮತ್ತು ತಂಡ ಗೀತಾ ಗಾಯನ ಪ್ರಸ್ತುತ ಪಡಿಸುವರು. ಜಯಂತಿಯ ಅಂಗವಾಗಿ ಅಂದು ಬೆಳಿಗ್ಗೆ 9.30 ರಿಂದ ವಿವಿಧ ಜಾನಪದ ಕಲಾತಂಡಗಳೊಂದಿಗೆ ನಗರದ ಹೊಳಲ್ಕೆರೆ ರಸ್ತೆಯ ಮಾರಮ್ಮನ ದೇವಸ್ಥಾನ ಸಮೀಪದ ಒನಕೆ ಓಬವ್ವನ ದೇವಸ್ಥಾನದಿಂದ ಗಾಂಧಿ ವೃತ್ತ, ಒನಕೆ ಓಬವ್ವ ವೃತ್ತ, ಮದಕರಿ ವೃತ್ತದಿಂದ ತರಾಸು ರಂಗಮಂದಿರದವರೆಗೂ ಮೆರವಣಿಗೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ತೆರಿಗೆ ಪಾವತಿಸಲು ಅಧಿಕಾರಿ ತಂಡ ರಚನೆ

» ದಾವಣಗೆರೆ

ಪ್ರಸಕ್ತ ಸಾಲಿನ ಆರ್ಥಿಕ ವರ್ಷವು ಮಾರ್ಚ್–2025ಕ್ಕೆ ಮುಕ್ತಾಯವಾಗಲಿದ್ದು, ಮಹಾ ನಗರಪಾಲಿಕೆಯಿಂದ ಆಸ್ತಿ ತೆರಿಗೆ, ನೀರಿನ ದರ, ಒಳಚರಂಡಿ ಸೇವಾ ಶುಲ್ಕಗಳನ್ನು ಪಾವತಿಸಿಕೊಳ್ಳುವುದಕ್ಕಾಗಿ ಪ್ರತಿ ವಾರ್ಡ್‍ಗಳಿಗೆ ಅಧಿಕಾರಿ, ಸಿಬ್ಬಂದಿಗಳ ತಂಡವನ್ನು ರಚಿಸಲಾಗಿದೆ. ಈ ಅಧಿಕಾರಿ, ಸಿಬ್ಬಂದಿಗಳು ತಮ್ಮ ಸ್ವತ್ತಿಗೆ ಭೇಟಿ ನೀಡಿದಾಗ ಬಾಕಿಯಿರುವ ತೆರಿಗೆಯ ಶುಲ್ಕಗಳನ್ನು ಪಾವತಿಸಬೇಕು.

## ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ

# ಪಡಿತರ ಧಾನ್ಯಗಳ ವಿತರಣೆ ತೂಕದ ವ್ಯತ್ಯಾಸ, ಆಹಾರ ಧಾನ್ಯ ಗುಣಮಟ್ಟ ಪರಿಶೀಲನೆ ಮಾಡುವಂತೆ ಸೂಚನೆ

» ದಾವಣಗೆರೆ

ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಧಾನ್ಯಗಳ ವಿತರಣೆಯಲ್ಲಿ ಆಗುವ ತೂಕದ ವ್ಯತ್ಯಾಸ, ಆಹಾರಧಾನ್ಯಗಳ ಗುಣಮಟ್ಟ ಪರಿಶೀಲನೆ ಮಾಡುವಂತೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು ಟಿ. ಬಸವರಾಜ್ ಅಧಿಕಾರಿಗಳಿಗೆ ಸೂಚಿಸಿದರು.

ಅವರು (ನ.07) ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಯೋಜನೆಯ ಪ್ರಗತಿಯನ್ನು ಪರಿಶೀಲಿಸಲಾಯಿತು, ಗ್ಯಾರಂಟಿ ಯೋಜನೆ ಫಲಾನುಭವಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಬ್ಯಾಂಕ್ ಕೆವೈಸಿ, ಬಯೋಮೆಟ್ರಿಕ್ ಮೂಲಕ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗುವಂತೆ ಕ್ರಮವಹಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ ಮಾತನಾಡುತ್ತಾ, ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಅರ್ಹ ನಾಗರಿಕರಿಗೂ ಸಿಗುವಂತಾಗಬೇಕು. ಈ ಯೋಜನೆಗಳು ಯಾರಿಗೆ ತಲುಪುತ್ತಿಲ್ಲ, ಅಂತವರಿಗೆ ಈಗಾಲೇ ಅರಿವು ಕಾರ್ಯಕ್ರಮ ಮಾಡಲಾಗಿದೆ. ಇನ್ನೂ ವೇಗದ ರೀತಿಯಲ್ಲಿ ಕಾರ್ಯನಿರ್ವಹಿಸಲಾಗುವುದು ಎಂದು ತಿಳಿಸಿದರು. ಅನ್ನಭಾಗ್ಯ ಯೋಜನೆಯಡಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ



ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರ ಟಿ.ಬಸವರಾಜ್‍ರವರು ತಹಶೀಲ್ದಾರರು ಹಾಗೂ ಉಪ ವಿಭಾಗಾಧಿಕಾರಿಗಳು ಜಂಟಿಯಾಗಿ ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪಡಿತರ ವಿತರಣೆ, ಪಡಿತರ ಧಾನ್ಯಗಳ ವಿತರಣೆಯಲ್ಲಿ ಆಗುವ ತೂಕದ ವ್ಯತ್ಯಾಸ, ಆಹಾರ ಧಾನ್ಯಗಳ ಗುಣಮಟ್ಟ ಪರಿಶೀಲನೆ ಮಾಡುವಂತೆ ಸೂಚಿಸಿದರು. ಜಿಲ್ಲಾ ಮಟ್ಟದ ಅಧಿಕಾರಿಗಳು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ಗ್ಯಾರಂಟಿ ಯೋಜನೆ ನಾಮನಿರ್ದೇಶಿತ ಸದಸ್ಯರುಗಳು ಮಾತನಾಡಿ ಹೆಚ್ಚುವರಿಯಾಗಿ ಬಿ.ಪಿ.ಎಲ್ ಕಾರ್ಡ್‍ಗಳಲ್ಲಿ 2000 ನಕಲಿ ಕಾರ್ಡ್‍ಗಳು ಇವೆ ಎಂದು ಪತ್ರಿಕೆಯಲ್ಲಿ ಪ್ರಕಟವಾದ ಬಗ್ಗೆ ಅಧ್ಯಕ್ಷರ ಗಮನಕ್ಕೆ ತಂದರು. ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ತಿಳಿಸಿದರು.

ಶಕ್ತಿ ಯೋಜನೆಯಡಿ ದಾವಣಗೆರೆ ವಿಭಾಗ ವ್ಯಾಪ್ತಿಯಲ್ಲಿ 11 ಜೂನ್ 2023 ರಿಂದ ಅಕ್ಟೋಬರ್ 2024 ರವರೆಗೆ ಒಟ್ಟಾರೆ 53515583 ಪ್ರಯಾಣಿಕರು ಬಸ್‍ಗಳಲ್ಲಿ ಸಂಚರಿಸಿದ್ದು, ಪ್ರಯಾಣ ವೆಚ್ಚವಾಗಿ ಒಟ್ಟು ರೂ.146.14 ಕೋಟಿಗಳನ್ನು ಸರ್ಕಾರ ಭರಿಸುತ್ತಿದೆ ಎಂದು ಮಾಹಿತಿ ನೀಡಿದರು.

ಗೃಹಲಕ್ಷ್ಮಿ ಯೋಜನೆಯಡಿ 366937 ಫಲಾನುಭವಿಗಳು ನೊಂದಣಿಯಾಗಿದ್ದು ಇದರಲ್ಲಿ 369677 ಫಲಾನುಭವಿಗಳಿಗೆ ರೂ.357.42 ಕೋಟಿ ಡಿಬಿಟಿ ಮೂಲಕ ಪಾವತಿಸಲಾಗಿದೆ.

ಯುವನಿಧಿ ಯೋಜನೆಯಡಿ ಜನವರಿ 2024 ರಿಂದ ಜುಲೈ 2024ರವರೆಗೆ 19539 ಪದವಿ ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಪಾವತಿಯಾದ ಮೊತ್ತ ರೂ.58617000 ಹಾಗೂ 243 ಡಿಪ್ಲೊಮೋ ಫಲಾನುಭವಿಗಳಿಗೆ ರೂ.364500 ಗಳನ್ನು ಪಾವತಿಸಲಾಗಿದೆ.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಚಾಲ್ತಿಯಲ್ಲಿರುವ 486977 ಸ್ಥಾವರಗಳಲ್ಲಿ 434002 ಸ್ಥಾವರಗಳ ಫಲಾನುಭವಿಗಳು ಇದರ ಲಾಭ ಪಡೆಯುತ್ತಿದ್ದು, 52975 ಆರ್. ಆರ್. ಸಂಖ್ಯೆ ಹೊಂದಿರುವ ಫಲಾನುಭವಿಗಳು ಮಾತ್ರ ಗೃಹಜ್ಯೋತಿ ಯೋಜನೆಗೆ ನೋಂದಣಿಯಾಗಿರುವುದಿಲ್ಲ ಎಂದು ಮಾಹಿತಿ ನೀಡಿದರು.

ಸದಸ್ಯರಾದ ಶಶಿಕಲಾಮೂರ್ತಿ ಎಂ.ಜಿ ಮಾತನಾಡಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬರಿಗೂ ತಲುಪುವಂತೆ ಈ ಯೋಜನೆಯನ್ನು ಕಾರ್ಯಗತಗೊಳಿಸಲಾಗಿದೆ. ಇದರಲ್ಲಿ ಕೆಲವು ಫಲಾನುಭವಿಗಳಿಗೆ ಈ ಯೋಜನೆ ತಲುಪಿರುವುದಿಲ್ಲ. ಹಾಗಾಗಿ ಪಂಚ ಗ್ಯಾರೆಂಟಿ ಯೋಜನೆಯ ಅಧಿಕಾರಿಗಳು ಯೋಜನೆಗಳ ಲೋಪ ದೋಷಗಳನ್ನು ಪರಿಶೀಲಿಸಿ ಎಲ್ಲಾ ಫಲಾನುಭವಿಗಳಿಗೆ ದೊರೆಯುವಂತೆ ಮಾಡಬೇಕು ಎಂದು ಸಭೆಗೆ ತಿಳಿಸಿದರು.

ಸುಭಾನ್‍ಸಾಬ್ ಮಾತನಾಡಿ ಕೆಲವೊಂದು ನ್ಯಾಯಬೆಲೆ ಅಂಗಡಿಗಳಲ್ಲಿ ಕಳಪೆ ಗುಣಮಟ್ಟದ ರಾಗಿಯನ್ನು ಹಂಚಿಕೆ ಮಾಡಲಾಗಿದೆ ಎಂದು ಸಭೆಯ ಗಮನಕ್ಕೆ ತಂದಾಗ ಮುಂದಿನ ದಿನಗಳಲ್ಲಿ ಮಾಹಿತಿ ಕಲೆಹಾಕಿ ಗುಣಮಟ್ಟದ ರಾಗಿ ವಿತರಿಸಲಾಗುವುದು ಎಂದು ಆಹಾರ ಇಲಾಖೆ ಉಪನಿರ್ದೇಶಕರಾದ ಸಿದ್ದರಾಮ್ ಮಾರಿಹಾಳ್ ತಿಳಿಸಿದರು.

ಎಸ್.ಎಸ್ ಗಿರೀಶ್ ಮಾತನಾಡಿ ವಿದ್ಯಾರ್ಥಿಗಳಿಗೆ ಕಾಲೇಜಿಗೆ ಹೋಗುವುದಕ್ಕೆ ಸರಿಯಾದ ಸಮಯಕ್ಕೆ ಸಿಟಿ ಬಸ್ಸುಗಳು ಬರುತ್ತಿಲ್ಲ, ಹಾಗಾಗಿ ಇನ್ನೂ ಕೆಲವೊಂದು ಬಸ್ಸುಗಳನ್ನು ಯಾವ ಮಾರ್ಗದಲ್ಲಿ ಸರಿಯಾದ ಸಮಯದಲ್ಲಿ ಇಲ್ಲವೋ, ಅಂತಹ ಮಾರ್ಗಗಳಿಗೆ ಹೆಚ್ಚುವರಿ ಬಸ್ಸುಗಳನ್ನು ಬಿಡಬೇಕೆಂದು ಸಭೆಗೆ ತಿಳಿಸಿದರು.

ಡೋಲಿ ಚಂದ್ರು ಮಾತನಾಡಿ ಕೆಲವೊಂದು ನ್ಯಾಯಬೆಲೆ ಅಂಗಡಿಯಲ್ಲಿ ಅಕ್ಕಿ ರಾಗಿ, ಗೋಧಿ ವಿತರಣೆಯಲ್ಲಿ ತಾರತಮ್ಯ ಮಾಡುತ್ತಿರುವ ನ್ಯಾಯಬೆಲೆ ಅಂಗಡಿಗಳಲ್ಲಿ ಶಿಸ್ತು ಕ್ರಮಕೈಗೊಳ್ಳಬೇಕು ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರುಗಳಾದ ಕೆ.ಎನ್. ಮಂಜುನಾಥ, ನಂಜಾನಾಯ್ಕ, ಅನೀಫ್ ಷಾ ಹಾಗೂ ಅನುಷ್ಠಾನ ಸಮಿತಿಯ ಎಲ್ಲಾ ಸದಸ್ಯರುಗಳು, ಉಪಸ್ಥಿತರಿದ್ದರು.

# ಆಧುನಿಕ ಭಾರತ ನಿರ್ಮಾಣದವರಗೂ ನಿರಂತರವಾಗಿ ಶ್ರಮಿಸಿ: ಸಿಎಂ ಸಿದ್ದರಾಮಯ್ಯ

» ಸಂಡೂರು

ಕಾಂಗ್ರೆಸ್‌ಪಕ್ಷಭಾರತದಸ್ವಾತಂತ್ರ್ಯಹೋರಾಟದಿಂದ ಹಿಡಿದು ತಂತ್ರಜ್ಞಾನದ ಆಧುನಿಕ ಭಾರತ ನಿರ್ಮಾಣದವರೆಗೂ ನಿರಂತರವಾಗಿ ಶ್ರಮಿಸಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.



* ನೆಹರೂ, ಇಂದಿರಾಗಾಂಧಿಯವರಿಂದ ಬಾಬು ಜಗಜೀವನ್ ರಾಮ್ ಅವರ ವರೆಗೂ ಭಾರತ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಭಿ ಮಾಡುವುದರಿಂದ ಹಿಡಿದು ಪ್ರತೀ ಕ್ಷೇತ್ರದಲ್ಲೂ ಭಾರತ ತಲೆ ಎತ್ತಿ ನಿಲ್ಲುವಂತೆ ಮಾಡಿದ್ದಾರೆ.
* ಈಗ ನಮ್ಮ ಸರ್ಕಾರ ರಾಜ್ಯದ ಪ್ರತೀ ಕುಟುಂಬಗಳಿಗೂ ತಿಂಗಳಿಗೆ 4–5 ಸಾವಿರ ರೂಪಾಯಿಯಿಂದ ವರ್ಷಕ್ಕೆ 60–70 ಸಾವಿರ ರೂಪಾಯಿ ನೇರವಾಗಿ ಕೊಡುವ ಮೂಲಕ ಪ್ರತೀ ಕುಟುಂಬವನ್ನೂ ಆರ್ಥಿಕವಾಗಿ ಸ್ವಾವಲಂಬಿಯನ್ನಾಗಿಸುತ್ತಿದೆ. ಇಡೀ ದೇಶದಲ್ಲಿ ಇಂಥಾ ಆರ್ಥಿಕ ಕಾರ್ಯಕ್ರಮ ಜಾರಿ ಮಾಡಿರುವುದು ನಮ್ಮ ಸರ್ಕಾರ ಮಾತ್ರ*
* ಮುಂಬಡ್ತಿಯಲ್ಲೂ ಮೀಸಲಾತಿ ತಂದಿದ್ದು, ಇದಕ್ಕಾಗಿ ಕಾನೂನು ಮಾಡಿದ್ದು, ಗುತ್ತಿಗೆಯಲ್ಲೂ ಮೀಸಲಾತಿ ತಂದಿದ್ದು, SCP/TSp ಕಾಯ್ದೆ ಜಾರಿ ಮಾಡಿದ್ದು ನಾವು*
* ಮಹಿಳೆಯರು, ರೈತರು, ಕಾರ್ಮಿಕರು, ವಿದ್ಯಾರ್ಥಿಗಳು, ಶ್ರಮಿಕರಿಗೆ ಪ್ರತೀ ತಿಂಗಳು ಅನುಕೂಲ ಮಾಡಿಕೊಡುತ್ತಿರುವುದು ನಮ್ಮ ಸರ್ಕಾರ.
* ಎಲ್ಲಾ ಜಾತಿ, ಎಲ್ಲಾ ಧರ್ಮ, ಎಲ್ಲಾ ವರ್ಗದವರ ಬದುಕಿಗೂ ಸ್ಪಂದಿಸುತ್ತಿರುವ ಏಕೈಕ ಸರ್ಕಾರ ನಮ್ಮದು.
* ಭೋವಿ ಅಭಿವೃದ್ಧಿ ನಿಗಮ, ಉಪ್ಪಾರ ಅಭಿವೃದ್ಧಿ ನಿಗಮ ಮಾಡಿದ್ದು ನಾವು,. ಭಗೀರತ ಜಯಂತಿಯನ್ನು ಸರ್ಕಾರ ಆಚರಿಸುವಂತೆ ಮಾಡಿದ್ದು ನಾವೇ ಮೊದಲು.
* ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದಾಗ ಇಂದಿರಾ ಕ್ಯಾಂಟೀನ್, ರೈತರ ಸಾಲ ಮನ್ನಾ ಜೊತೆಗೆ ಹತ್ತಾರು ಭಾಗ್ಯಗಳನ್ನು ಕೊಟ್ಟಿದ್ದು, ಈಗ ಐದು ಗ್ಯಾರಂಟಿಗಳ ಮೂಲಕ 56 ಸಾವಿರ ಕೋಟಿ ರೂಪಾಯಿಯನ್ನು ನೇರವಾಗಿ ರಾಜ್ಯದ ಜನರ ಖಾತೆಗೆ ಹಾಕುತ್ತಿರುವುದು ನಮ್ಮ ಸರ್ಕಾರ.
* ಹೀಗಾಗಿ ಜನ ಕಲ್ಯಾಣದ ಗುರಿ, ಬದ್ಧತೆ, ಕಾಳಜಿ ಇಟ್ಟುಕೊಂಡಿರುವ ಕಾಂಗ್ರೆಸ್ ಅಭ್ಯರ್ಥಿ ಅನಗನಪೂರ್ಣಮ್ಮ ಅವರನ್ನು ಗೆಲ್ಲಿಸಿ. ನಮ್ಮ ರೈತರ ಸಾಲ ಮನ್ನಾ ಮಾಡದೆ ಕಾರ್ಪೋರೇಟ್ ಶ್ರೀಮಂತರ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ ಬಡವ ಮತ್ತು ಮಧ್ಯಮ ವರ್ಗದವರ ವಿರೋಧಿ ಬಿಜೆಪಿಯನ್ನು ಸೋಲಿಸಿ ಎಂದು ಕರೆ ನೀಡಿದರು.

### ರಾಜ್ಯೋತ್ಸವ ಅಂಗವಾಗಿ ಗ್ಲಾಸ್‌ಹೌಸ್‌ನಲ್ಲಿ ನಿರಂತರ ಸಾಂಸ್ಕೃತಿಕ ಕಾರ್ಯಕ್ರಮ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ 69ನೇ ಕರ್ನಾಟಕ ರಾಜ್ಯೋತ್ಸವ ಪ್ರಯುಕ್ತ ನವಂಬರ್ 9 ರಂದು ಸಂಜೆ 5.30ಕ್ಕೆ ನಗರದ ಗಾಜಿನ ಮನೆಯಲ್ಲಿ 2024 ನವಂಬರ್ ತಿಂಗಳ ಸಾಂಸ್ಕೃತಿಕ ಕಾರ್ಯಕ್ರಮಗಳ ಸುವರ್ಣ ಸಂಭ್ರಮವನ್ನು ಏರ್ಪಡಿಸಲಾಗಿದೆ. ನವೆಂಬರ್ 30 ರ ವರೆಗೆ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದ್ದು ಸಾರ್ವಜನಿಕರು ಭಾಗವಹಿಸಿ ವೀಕ್ಷಣೆ ಮಾಡಲು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.
ಕಾರ್ಯಕ್ರಮಗಳ ವಿವರ: ನವಂಬರ್ 9 ರಂದು ನಗರದ ಚೇತನ್ ಕುಮಾರ್ ಮತ್ತು ಸಂಗಡಿಗರಿಂದ ಸುಗಮ ಸಂಗೀತ, ಇಂಚನ ಮತ್ತು ದರ್ಶನ ಇವರಿಂದ ಸ್ಯಾಕ್ಸೋಪೋನ್ ವಾದನ, ಬಾಲಿ ಜಂಬೆ ಮತ್ತು ಸಂಗಡಿಗರು ಜಂಬೆ ಝಲಕ್ ಹಾಗೂ ಕಡಬಗೆರೆ ಶ್ರೀನಿವಾಸ್‌ರವರಿಂದ ಜಾನಪದ ಜಾದೂ, ನವಂಬರ್ 10 ರಂದು ಆನಂದಗೌಡ ಪಾಟೀಲ್ ಮತ್ತು ಸಂಗಡಿಗರಿಂದ ಹಿಂದೂಸ್ತಾನಿ ಸಂಗೀತ, ಸವಿತಾ ಚಿರುಕುಣಯ್ಯ ಪೂಜಾ ಕುಣಿತ, ನಮನ ಅಕಾಡೆಮಿಯವರಿಂದ ನೃತ್ಯರೂಪಕ, ನವಂಬರ್ 16 ರಂದು ಯುಗಧರ್ಮ ರಾಮಣ್ಣ ಅವರಿಂದ ಜಾನಪದ ಗೀತೆಗಳು, ಪಂಡಿತ್ ರವೀಂದ್ರ ಅವರಿಂದ ಹಿಂದೂಸ್ತಾನಿ ಸಂಗೀತ, ಪಲ್ಲವಿ ಮತ್ತು ಸಂಗಡಿಗರಿಂದ ಮಹಿಳಾ ವೀರಗಾಸೆ, ನವಂಬರ್ 17 ರಂದು ಮಹೇಶ್ ಕುಮಾರ್ ಮತ್ತು ತಂಡದವರಿಂದ ಚಂಡೆವಾದನ, ಬಸವಕಲಾ ಲೋಕ ಅವರಿಂದ ಸಂಗೀತ ಕಾರ್ಯಕ್ರಮ, ಪಂಡಿತ್ ಎಂ.ಎಸ್ ಪ್ರದೀಪ್ ಕುಮಾರ್, ಇವರಿಂದ ಸಿತಾರ ವಾದನ, ನವಂಬರ್ 23 ರಂದು ರಾಮಚಂದ್ರ ಹಡಪದ ಇವರಿಂದ ಸಂಗೀತ ಕಾರ್ಯಕ್ರಮ, ಸಂಕರ್ಷಣ ನೃತ್ಯ ಶಾಲೆಯಿಂದ ನೃತ್ಯ ರೂಪಕ, ನವಂಬರ್ 24 ರಂದು ರಮೇಶ್‌ನಾಥ್ ಕದ್ರಿ ಇವರಿಂದ ಸ್ಯಾಕ್ಸೋಪೋನ್ ವಾದನ, ನೂಪುರ ಕಲಾ ಸಂಸ್ಥೆಯವರಿಂದ ನೃತ್ಯ ರೂಪಕ, ನವಂಬರ್ 29 ರಂದು ಶೃತಿ ಮತ್ತು ಸಂಗಡಿಗರಿಂದ ಲಂಬಾಣಿ ನೃತ್ಯ, ಅದಮ್ಯ ಕಲಾ ಸಂಸ್ಥೆಯವರಿಂದ ವಾದ್ಯ ಸಂಗೀತ, ಪರಶುರಾಮ್ ಸಂಗಡಿಗರಿಂದ ಜಾನಪದ ಸಂಗೀತ, ನವಂಬರ್ 30 ರಂದು ಚಿರಂತನ ಅಕಾಡೆಮಿಯಿಂದ ನೃತ್ಯ ರೂಪಕ, ಸವಿತಾ ಗಣೇಶ ಅವರಿಂದ ಸಂಗೀತ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

## ಪ್ರಮುಖ ಸುದ್ದಿ

### ತಾಲ್ಲೂಕು ಮಟ್ಟದ ಆಂಗ್ಲಪ್ರಶ್ನೆಪತ್ರಿಕೆ ತಯಾರಿಕಾ ಕಾರ್ಯಗಾರ

# ಶಿಕ್ಷಣ ಇಲಾಖೆಯ ಪ್ರಗತಿಗೆ ಶಿಕ್ಷಕರ ಪ್ರಾಮಾಣಿಕ ಸೇವೆಯೇ ಅಡಿಪಾಯ: ಡಿಡಿಪಿಐ ಮಂಜುನಾಥ

» ಚಳ್ಳಕೆರೆ

ಕಳೆದ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ನಿರೀಕ್ಷಿತ ಮಟ್ಟದಲ್ಲಿ ಲಭ್ಯವಾಗಿಲ್ಲ. ಆದರೆ, ಇದು ಮತ್ತೆ ಮರುಕಳಿಸದಂತೆ ಎಲ್ಲರೂ ಜಾಗ್ರತೆ ವಹಿಸಬೇಕು. ಶಿಕ್ಷಣ ಇಲಾಖೆಯ ಶೈಕ್ಷಣಿಕ ಅಭಿವೃದ್ಧಿಗೆ ಶಿಕ್ಷಕರ ಸಮೂಹ ಶಕ್ತಿಯಾಗಿ ನಿಲ್ಲಬೇಕೆಂದು ಡಿಡಿಪಿಐ ಎಂ.ಆರ್. ಮಂಜುನಾಥ ತಿಳಿಸಿದರು.

ಅವರು,ಶುಕ್ರವಾರನಗರದಎನ್.ಜಯಣ್ಣ ಶಿಕ್ಷಣ ತರಬೇತಿ ಮಹಾವಿದ್ಯಾಲಯದಲ್ಲಿ ತಾಲ್ಲೂಕು ಮಟ್ಟದ ಆಂಗ್ಲಭಾಷ ವಿಷಯ ಪ್ರಶ್ನೆಪತ್ರಿಕೆ ತಯಾರಿಕಾ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಶಿಕ್ಷಣ ಕ್ಷೇತ್ರದಲ್ಲಿ ಆಂಗ್ಲಭಾಷೆ ತನ್ನದೇಯಾದ ಪ್ರಾಮುಖ್ಯತೆ ಹೊಂದಿದೆ. ಆದ್ದರಿಂದ ಪ್ರಶ್ನೆಪತ್ರಿಕೆತಯಾರಿಕೆಯಲ್ಲೂಆಂಗ್ಲಭಾಷಾ



ಶಿಕ್ಷಕರು ಹೆಚ್ಚು ಪರಿಶ್ರಮವನ್ನು ವಹಿಸಬೇಕು. ನಿಮ್ಮೆಲ್ಲರ ಸಹಕಾರದಿಂದ ಈ ಕಾರ್ಯ ಉತ್ತಮವಾಗಿ ನಡೆಯಲಿದೆ ಎಂಬ ಭರವಸೆ ನನಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಎಸ್‌ಎಸ್‌ಎಲ್‌ಸಿ ಪರೀಕ್ಷೆಗೂ ಸೇರಿದಂತೆ ಹಲವಾರು ಪ್ರಮುಖ ವಿಷಯಗಳ ಬಗ್ಗೆ ಶಿಕ್ಷಕರು ಗಮನಹರಿಸಬೇಕಿದೆ.

ಶಿಕ್ಷಣ ಕ್ಷೇತ್ರದಲ್ಲಿ ವಿವಿಧ ವಿಷಯಗಳ ಪ್ರಶ್ನೆಪತ್ರಿಕೆ ತಯಾರಿಕೆಯೂ ಸಹ ವಿಶೇಷವಾಗಿದೆ.

ಪ್ರಶ್ನೆಗಳನ್ನು ಸಿದ್ದಪಡಿಸಿ ವಿದ್ಯಾರ್ಥಿಗಳಿಗೆ ನೀಡುವ ಮಹತ್ತರ ಜವಾಬ್ದಾರಿ ನಿಮ್ಮಮೇಲಿದೆ. ಈ ಕಾರ್ಯದಲ್ಲಿ ನಿಮ್ಮೆಲ್ಲರ ಕೌಶಲ್ಯ ಮತ್ತು ಜಾಣ್ಮೆ ಅಡಗಿದೆ. ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮ ಪಡಿಸುವ ನಿಟ್ಟಿನಲ್ಲಿ ಡಿಡಿಪಿಐ ಮಾರ್ಗದರ್ಶನದಲ್ಲಿ ತಾಲ್ಲೂಕಿನ ಪ್ರತಿಪ್ರೌಢಶಾಲೆಯಲ್ಲೂವಿಶೇಷಬೋಧನಾ ವ್ಯವಸ್ಥೆಯನ್ನು ಕೈಗೊಳ್ಳಲಾಗುವುದು ಎಂದರು.

ವಿಷಯ ಪರಿವೀಕ್ಷಕ ಎಚ್.ಟಿ.ಚಂದ್ರಣ್ಣ, ಚನ್ನಬಸಣ್ಣ, ತಾಲ್ಲೂಕು ಅಧ್ಯಕ್ಷೆ ಎನ್. ಜ್ಯೋತಿ, ಶಿವಕೀರ್ತಿ, ಡಿ.ಆರ್.ಪ್ರಮೀಳಾ ಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ತೋಪುರಮಾಳಿಗೆ ಗ್ರಾಮದಲ್ಲಿ ಸಂಗೀತ ಗಾಯನ ಕಾರ್ಯಕ್ರಮ



» ಚಿತ್ರದುರ್ಗ

ಚೌಡೇಶ್ವರಿ ಜನಪದ ಹಾಗೂ ಸೋಬಾನೆ ಪದಗಳ ಮಹಿಳಾ ಕಲಾ ಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ತೋಪುರಮಾಳಿಗೆ ಗ್ರಾಮದಲ್ಲಿ ಸಂಗೀತ ಗಾಯನ ಕಾರ್ಯಕ್ರಮ ನಡೆಯಿತು. ಕೊಲ್ಲಾಪುರದಮ್ಮ ದೇವಸ್ಥಾನದ ಅರ್ಚಕ ಮೈಲಾರಪ್ಪ ಸಂಗೀತ ಗಾಯನ ಕಾರ್ಯಕ್ರಮ ಉದ್ಘಾಟಿಸಿ ಆಧುನಿಕ ಯುಗದಲ್ಲಿ ಸಂಗೀತ ಗಾಯನವನ್ನು ಕೇಳುವವರ ಸಂಖ್ಯೆ ತುಂಬಾ ವಿರಳ. ಮೊಬೈಲ್, ವಾಟ್ಸ್‌ಪ್, ಫೇಸ್‌ಬುಕ್‌ಗಳಲ್ಲಿಯೇ ಎಲ್ಲರೂ ಮುಳುಗಿ ಹೋಗಿರುವುದರಿಂದ ಸಂಗೀತ ಗಾಯನದ ಬಗ್ಗೆ ಆಸಕ್ತಿಯಿರುವವರನ್ನು ಹುಡುಕುವಂತಾಗಿದೆ ಎಂದು ಹೇಳಿದರು.ತೋಪುರಮಾಳಿಗೆ ಗ್ರಾಮದ ಮುಖಂಡರುಗಳಾದ ರಾಮಣ್ಣ, ವೆಂಕಟೇಶ್, ಕೆಂಚಪ್ಪ ಇವರುಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

### ಅನೈರ್ಮಲ್ಯ ಶೌಚಾಲಯ ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಸಮೀಕ್ಷಾ ಕಾರ್ಯ

» ದಾವಣಗೆರೆ

ದಾವಣಗೆರೆ ಜಿಲ್ಲೆಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ನವಂಬರ್ 15 ರಂದು ಏಕಕಾಲದಲ್ಲಿ ಅನೈರ್ಮಲ್ಯ ಶೌಚಾಲಯಗಳು ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಸಮೀಕ್ಷಾ ಕಾರ್ಯವನ್ನು ನಡೆಸಲಾಗುತ್ತದೆ. ಮಹಾನಗರಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್, ಗ್ರಾಮ ಪಂಚಾಯತ್‌ಗಳ ಸಮೀಕ್ಷಾ ತಂಡದ ಪ್ರತಿನಿಧಿಗಳು ನಗರ, ಗ್ರಾಮಗಳಲ್ಲಿ ಸಮೀಕ್ಷೆ ನಡೆಸಲಿದ್ದು, ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳು ಖುದ್ದು ನಗರ, ಸ್ಥಳೀಯ ಸಂಸ್ಥೆಗಳ ಕಚೇರಿಗಳಿಗೆ ಹಾಜರಾಗಿ ನಿಗಧಿತ ಅರ್ಜಿ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಆಯಾ ವ್ಯಾಪ್ತಿಯ ಮಹಾನಗರಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಕಚೇರಿಗಳನ್ನು ಸಂಪರ್ಕಿಸಲು ಜಿಲ್ಲಾಧಿಕಾರಿ ಹಾಗೂ ಸ್ಕ್ಯಾವೆಂಜರ್ಸ್ ಸಮೀಕ್ಷಾ ಸಮಿತಿಯ ಅಧ್ಯಕ್ಷರಾದ ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

### ಪಾಲಿಕೆಯಿಂದ ನವೆಂಬರ್ 13 ರಿಂದ ಡಿಸೆಂಬರ್ 31ರ ವರೆಗೆ ಇ-ಆಸ್ತಿ ವಿಶೇಷ ಆಂದೋಲನ

» ದಾವಣಗೆರೆ

ಮಹಾನಗರಪಾಲಿಕೆ ವತಿಯಿಂದ ಏಕಗವಾಕ್ಷಿಯಡಿ ಇ-ಆಸ್ತಿ ವಿಶೇಷ ಆಂದೋಲನವನ್ನು ನವಂಬರ್ 13 ರಿಂದ ಡಿಸೆಂಬರ್ 31 ರವರೆಗೆ ಮಹಾನಗರಪಾಲಿಕೆಯ 3 ವಲಯ ಕಚೇರಿಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ಆಸ್ತಿಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಈ ಆಂದೋಲನದಲ್ಲಿ ಕಡ್ಡಾಯವಾಗಿ ಸಲ್ಲಿಸಿ, ತ್ವರಿತವಾಗಿ ಇ-ಆಸ್ತಿ(ನಮೂನೆ-2)ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇ-ಆಸ್ತಿ ಪಡೆಯಲು ಸಲ್ಲಿಸಬೇಕಾದ ದಾಖಲೆಗಳು: ಸ್ವತ್ತಿನ ಮಾಲೀಕತ್ವದ ದಾಖಲೆಗಳು ಕ್ರಯ, ದಾನ, ಪಾಲುವಿಭಾಗ ಹಾಗೂ ಇತರೆ ನೊಂದಣಿ ದಾಖಲೆಗಳು, ಸ್ವತ್ತಿನ ಮಾಲೀಕರ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ, ಸ್ವತ್ತಿನ ಛಾಯಾಚಿತ್ರ, ಮಾಲೀಕರ ಗುರುತಿನ ದಾಖಲೆ ಮತದಾರರ ಗುರುತಿನ ಚೀಟಿ, ಪ್ಯಾನ್ ಕಾರ್ಡ್, ಸಕ್ಷಮ ಪ್ರಾಧಿಕಾರದಿಂದ ಪಡೆದ ಬಡಾವಣೆ ಅನುಮೋದನೆ ಪತ್ರ ಹಾಗೂ ನಕ್ಷೆ, ಕಟ್ಟಡ ಪರವಾನಿಗೆ ಪಡೆದ ದಾಖಲೆ, 2001-02ನೇ ಸಾಲಿನಿಂದ 2024-25ನೇ ಸಾಲಿನವರೆಗೆ ಆಸ್ತಿ ತೆರಿಗೆ ಪಾವತಿಸಿದ ದಾಖಲೆಗಳು ಹಾಗೂ ನೀರಿನ ಶುಲ್ಕ, ಒಳಚರಂಡಿ, ಘನತ್ಯಾಜ್ಯ ಸೇವಾ ಶುಲ್ಕ ಪಾವತಿಸಿದ ದಾಖಲೆಗಳು.

ವಲಯ ಕಚೇರಿಗಳ ವಿವರ ಹಾಗೂ ಸಂಪರ್ಕಿಸಬೇಕಾದ ವಿವರ : ವಲಯ ಕಛೇರಿ-1, ರಾಜೀವ್ ಗಾಂಧಿ ಬಡಾವಣೆ ದಾವಣಗೆರೆಯ ವಲಯದ ಆಯುಕ್ತರಾದ ನಾಗರತ್ನಮ್ಮ ಮೊ.ಸಂ:7349048992, ಸಂಪರ್ಕಿಸಬೇಕಾದ ಅಧಿಕಾರಿ ಕಚೇರಿ ವ್ಯವಸ್ಥಾಪಕರಾದ ಗೋವಿಂದ ನಾಯ್ಕ ಮೊ.ಸಂ:9611105139, ವಲಯ ಕಚೇರಿ-2, ಟಿವಿ ಸ್ಟೇಶನ್ ಮುಂಭಾಗ, ಲೋಕಿಕೆರೆ ರಸ್ತೆ ದಾವಣಗೆರೆಯ ವಲಯ ಆಯುಕ್ತರಾದ ಇಸ್ಮಾಯಿಲ್ ಮೊ.ಸಂ:9844367555, ಸಂಪರ್ಕಿಸಬೇಕಾದ ಅಧಿಕಾರಿ ಕಮಿಟಿ ಸೆಕ್ರೆಟರಿ ಸರಳಾ ಮೊ.ಸಂ: 9901124232, ವಲಯ ಕಚೇರಿ-3, ಆಶ್ರಯ ಆಸ್ಪತ್ರೆ ಪಕ್ಕ ಎಂ.ಸಿ.ಸಿ ಎ. ಬ್ಲಾಕ್ ದಾವಣಗೆರೆ ವಲಯ ಆಯುಕ್ತರಾದ ಈರಮ್ಮ ಮೊ.ಸಂ: 9901768584, ಸಂಪರ್ಕಿಸಬೇಕಾದ ಕಚೇರಿ ವ್ಯವಸ್ಥಾಪಕರಾದ ತ್ರಿನೇತ್ರ ಮೊ.ಸಂ: 8971454920 ನ್ನು ಸಂಪರ್ಕಿಸಿ.

# ಸರ್ಕಾರ ನೀತಿ ನಿರೂಪಣೆಗೆ ಸಾಂಖ್ಯಿಕ ಇಲಾಖೆ ದತ್ತಾಂಶಗಳೇ ಆಧಾರ: ಎಸ್.ಜೆ.ಸೋಮಶೇಖರ್

» ಚಿತ್ರದುರ್ಗ

ಸರ್ಕಾರದ ನೀತಿ ನಿರೂಪಣೆಗೆ ಸಾಂಖ್ಯಿಕ ಇಲಾಖೆ ದತ್ತಾಂಶಗಳೇ ಆಧಾರವಾಗಿವೆ. ಸಾಂಖ್ಯಿಕ ಇಲಾಖೆ ಸಂಗ್ರಹಿಸುವ ದತ್ತಾಂಶಗಳು ಹೆಚ್ಚಿನ ಮಹತ್ವ ಹೊಂದಿವೆ ಎಂದು ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಹಾಗೂ ಜಿಲ್ಲಾಡಳಿತದ ವತಿಯಿಂದ ಶುಕ್ರವಾರ 2024-25ನೇ ಸಾಲಿನ ಕೇಂದ್ರಪುರಸ್ಕೃತ ಯೋಜನೆಗಳಾದ ಸಕಾಲಿಕ ವರದಿ ಯೋಜನೆ ಮತ್ತು ಬೆಳೆ ಅಂಕಿ-ಅಂಶಗಳ ಸುಧಾರಣೆ ಯೋಜನೆಗಳಿಗೆ ಸಂಬಂಧಿಸಿದಂತೆ ವಿಭಾಗಮಟ್ಟದ ಪುನರ್‌ಮನನ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಸಾರ್ವಜನಿರಿಂದ ಹೆಚ್ಚಿನ ಪ್ರಶಂಸೆಗೆ ಒಳಗಾಗದೆ ಇದ್ದರೂ ಸಹ, ಸಾಂಖ್ಯಿಕ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಅನವರತ ಕೆಲಸ ಮಾಡುತ್ತಿರುತ್ತಾರೆ. ಸರ್ಕಾರಕ್ಕೆ ಅಗತ್ಯವಾದ ಮೂಲ ದತ್ತಾಂಶಗಳನ್ನು ಮುತುವರ್ಜಿಯಿಂದ ಸಂಗ್ರಹಿಸುತ್ತಾರೆ. ಆದರೆ ಈ ಬಗ್ಗೆ ಬಹಳಷ್ಟು ಜನರಿಗೆ ಮಾಹಿತಿ ಇರುವುದಿಲ್ಲ. ಯಾವುದೇ ಯೋಜನೆಗಳನ್ನು ಸರ್ಕಾರ ರೂಪಿಸಬೇಕು ಎಂದರೆ ಅದಕ್ಕೆ ಸಾಂಖ್ಯಿಕ ಇಲಾಖೆ ಮೂಲ ದತ್ತಾಂಶಗಳೇ ಆಧಾರವಾಗಿರುತ್ತವೆ ಎಂದು ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ತಿಳಿಸಿದರು.

ಜಿಲ್ಲೆ ಸಂಪೂರ್ಣ ಮಾಹಿತಿ ಸಿದ್ದಪಡಿಸಿ, ಅದರ ಚಿತ್ರಣ ನೀಡುವಲ್ಲಿ ಸಾಂಖ್ಯಿಕ ಇಲಾಖೆ ಪ್ರಮುಖ ಪಾತ್ರ ವಹಿಸುತ್ತದೆ. ಹಲವಾರು ದತ್ತಾಂಶ ಸಂಗ್ರಹಿಸಲು ಕ್ಷೇತ್ರದಲ್ಲಿ ಸಾಂಖ್ಯಿಕ





ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಾರೆ. ಈ ವೇಳೆ ಅನೇಕ ತಾಂತ್ರಿಕ ಅಡಚಣೆಗಳು ಎದುರಾಗುತ್ತವೆ. ಕಾರ್ಯಾಗಾರದಲ್ಲಿ ಅಕ್ಕಪಕ್ಕದ 6 ಜಿಲ್ಲೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದು, ಆರೋಗ್ಯಕರ ಚರ್ಚೆ ಮೂಲಕ ಈ ತೊಂದರೆಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ. ತಂತ್ರಾಂಶ ಆಧಾರಿತ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳುವಾಗ ಅನುಸರಿಸಬೇಕಾದ ಮಾರ್ಗಸೂಚಿಗಳ ಕುರಿತು ಬೆಂಗಳೂರಿನ ನಿರ್ದೇಶನಾಲಯದ ಅಧಿಕಾರಿಗಳು ಉಪನ್ಯಾಸದಲ್ಲಿ ಉಪಯುಕ್ತ ಮಾಹಿತಿಯನ್ನು ಹಂಚಿಕೊಳ್ಳಲಿದ್ದಾರೆ ಎಂದು ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು. ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ನಿರ್ದೇಶಕ ಚಂದ್ರಶೇಖರ್ ಗುಡಿ ಮಾತನಾಡಿ, ಸಾಂಖ್ಯಿಕ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಪುನರ್‌ಮನನ ತರಬೇತಿ ಕಾರ್ಯಾಗಾರವನ್ನು ಈಗಾಗಲೇ ಎರಡು ಕಡೆ ಯಶಸ್ವಿಯಾಗಿ ನಡೆಸಲಾಗಿದ್ದು, ವಿಷಯಗಳನ್ನು ತಿಳಿದು, ಸಂದೇಹಗಳನ್ನು ಬಗೆಹರಿಸಿಕೊಂಡು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಕೃಷಿ-ಅಂಕಿ ಅಂಶಗಳ ಮಾಹಿತಿ, ಬೆಳೆ ಸಮೀಕ್ಷೆ ಸೇರಿದಂತೆ ಮಾಹಿತಿ ಸಂಗ್ರಹಣೆಯ ಕಾರ್ಯದಿಂದ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವಾಗಲಿದೆ. ಹಾಗಾಗಿ ಮಾಹಿತಿ ಸಂಗ್ರಹಣೆ ಕಾರ್ಯವು ಅತ್ಯಂತ ನಿಖರವಾಗಿರುವುದು ಬಹಳ ಮುಖ್ಯವಾಗಿದೆ ಎಂದರು.ಕಳೆದ ಬಾರಿ 1.35 ಲಕ್ಷ ಬೆಳೆ ಕಟಾವು ಪ್ರಯೋಗಗಳನ್ನು ನಡೆಸಲಾಗಿದ್ದು, ವಿವಿಧ ಕಾರಣಗಳಿಂದಾಗಿ 35 ಸಾವಿರ ಬೆಳೆ ಕಟಾವು ಪ್ರಯೋಗಗಳು ಸಮರ್ಪಕವಾಗಿ ನಡೆದಿಲ್ಲ ಎಂದು ತಿಳಿಸಿದ ಅವರು, ಬೆಳೆ ಕಟಾವು ಪ್ರಯೋಗಗಳನ್ನು ಗಂಭೀರವಾಗಿ ನಡೆಸಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

**ಶೇ.100ರಷ್ಟು ಜನನ-ಮರಣ ನೋಂದಣಿ ಆಗಲಿ:** ಪ್ರಸ್ತುತ ಆರೋಗ್ಯ ಇಲಾಖೆ ದತ್ತಾಂಶಗಳ ಪ್ರಕಾರ ಶೇ.100 ರಷ್ಟು ಸಾಂಸ್ಥಿಕ ಹೆರಿಗೆಗಳು ಆಗುತ್ತಿವೆ. ಆದರೂ ಜನನ ನೊಂದಣಿಯಲ್ಲಿ ವಿಳಂಭವಾಗುತ್ತಿವೆ. ಈ ವೇಳೆ ಮನೆಯಲ್ಲಿಯೇ ಹೆರಿಗೆ ಆಗಿವೆ ಎಂದು ನೊಂದಣಿ ಮಾಡಿಸಲಾಗುತ್ತದೆ. ಈ ವೈರುದ್ಯದಿಂದ ಈಗಲೂ ಶೇ.80 ರಷ್ಟು ಜನನ ಮನೆಯಲ್ಲಿಯೇ ಎಂದು ದಂತ್ತಾಂಶದಲ್ಲಿ ಬಿಂಬಿತವಾಗುತ್ತಿದೆ. ಗ್ರಾಮ ಮಟ್ಟದಲ್ಲಿ ಜನನ ಮತ್ತು ಮರಣ ನೊಂದಣಿಯನ್ನು ಸುಲಭಗೊಳಿಸುವ ದೃಷ್ಟಿಯಿಂದ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳನ್ನು ಜನನ-ಮರಣ ನೊಂದಣಿ ಅಧಿಕಾರಿಯನ್ನಾಗಿ ಸರ್ಕಾರ ನೇಮಿಸಿದೆ. ತ್ವರಿತವಾಗಿ ಹಾಗೂ ಶೇ.100 ರಷ್ಟು ಜನನ-ಮರಣ ನೋಂದಣಿಯಾಗಬೇಕು ಎಂದು ನಿರ್ದೇಶಕ ಚಂದ್ರಶೇಖರ್ ಗುಡಿ ಹೇಳಿದರು.

ಇದೇ ಸಂದರ್ಭದಲ್ಲಿ ಸಾಂಖ್ಯಿಕ ತಜ್ಞ ಪ್ರೊ.ಪಿ.ಸಿ.ಮಹಾಲನೋಬಿಸ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ನಂತರ ಜನನ ಪ್ರಮಾಣ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಧಿಕಾರಿ ಎಂ.ಕಾರ್ತಿಕ್, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಕೃಷಿ ಅಂಕಿ-ಅಂಶ ಮತ್ತು ಬೆಳೆ ವಿಮಾ ವಿಭಾಗದ ಅಪರ ನಿರ್ದೇಶಕ ಗುರುರಾಜ್ ರಾವ್, ಸಿ.ಎನ್.ಎಲ್ ವಿಭಾಗದ ಅಪರ ನಿರ್ದೇಶಕ ಬಸನಗೌಡ, ಕೃಷಿ ಅಂಕಿ-ಅಂಶ ವಿಭಾಗದ ಜಂಟಿ ನಿರ್ದೇಶಕ ಟಿ.ಶಶಿಧರ್, ಬೆಳೆ ವಿಮಾ ವಿಭಾಗದ ಜಂಟಿ ನಿರ್ದೇಶಕಿ ಲಲಿತಾ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಸಹಾಯಕ ನಿರ್ದೇಶಕರಾದ ಚಂದ್ರಕಲಾ, ಪುಷ್ಪ, ಸುಮಾ ಸೇರಿದಂತೆ ಚಿತ್ರದುರ್ಗ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ರವಿಕುಮಾರ್ ಸೇರಿದಂತೆ ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಶಿವಮೊಗ್ಗ, ಬಳ್ಳಾರಿ, ಕೊಪ್ಪಳ ಜಿಲ್ಲೆಗಳಲ್ಲಿನ ಎಲ್ಲಾ ಸಾಂಖ್ಯಿಕ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ಅನ್ಯ ಭಾಷೆಗಳ ಆಕ್ರಮಣವನ್ನು ತಡೆದುಕೊಳ್ಳುವ ಶಕ್ತಿ ಕನ್ನಡ ಭಾಷೆಗಿದೆ: ಬಿಇಓ ಎಸ್.ನಾಗಭೂಷಣ್

» ಚಿತ್ರದುರ್ಗ

ಅನ್ಯ ಭಾಷೆಗಳ ಆಕ್ರಮಣವನ್ನು ತಡೆದುಕೊಳ್ಳುವ ಶಕ್ತಿ ಕನ್ನಡ ಭಾಷೆಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಹೇಳಿದರು.

ತುರುವನೂರು ರಸ್ತೆ ಬಿ.ಎಲ್.ಗೌಡ ಲೇಔಟ್‌ನಲ್ಲಿರುವ ಪ್ರಕೃತಿ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಶುಕ್ರವಾರ ಏರ್ಪಡಿಸಲಾಗಿದ್ದ

ಎಳೆಯೋಣ ಬನ್ನಿ ಕನ್ನಡಮ್ಮನ ತೇರು ವಿಶೇಷ ಮೆರವಣಿಗೆ ಹಾಗೂ ಪ್ರಕೃತಿ ಹಬ್ಬ ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಶಿಕ್ಷಣದ ಜೊತೆ ಸಂಸ್ಕಾರ ಕನ್ನಡ ಭಾಷೆಯ ಮಹತ್ವ ತಿಳಿಸಬೇಕಿದೆ. ನವೆಂಬರ್ ತಿಂಗಳ ಪೂರ್ತಿ ಎಲ್ಲೆಡೆ ಕನ್ನಡ ರಾಜ್ಯೋತ್ಸವವನ್ನು ವರ್ಣರಂಜಿತವಾಗಿ ಆಚರಿಸಲಾಗುವುದು. ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಎಲ್ಲರ ಮನೆ ಮನಗಳಲ್ಲಿ ಪಸರಿಸಬೇಕು. ಕರ್ನಾಟಕದಲ್ಲಿರುವ ಪ್ರತಿಯೊಬ್ಬರು ಕನ್ನಡ ಭಾಷೆ ಬಗ್ಗೆ ಅಭಿಮಾನ ಮೂಡಿಸಿಕೊಂಡು ಸುಂದರವಾದ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಬೇಕು ಎಂದು ಮನವಿ ಮಾಡಿದರು.

ಪ್ರಕೃತಿ ಶಾಲೆ ಕನ್ನಡಮ್ಮನ ತೇರು ವಿಶೇಷ ಮೆರವಣಿಗೆ ಹಾಗೂ ಪ್ರಕೃತಿ ಹಬ್ಬ ಆಚರಿಸುತ್ತಿರುವುದು ನಿಜಕ್ಕೂ ಸಂತೋಷ. ಕನ್ನಡ ಕಳೆಗುಂದುತ್ತಿದೆ. ಅದಕ್ಕೆ ಪರ ಭಾಷಿಕರ ಹಾವಳಿ ಜಾಸ್ತಿಯಾಗಿರುವುದು ಕಾರಣ. ಆದ್ದರಿಂದ ಎಲ್ಲರೂ ಕನ್ನಡಾಭಿಮಾನ




ಬೆಳೆಸಿಕೊಳ್ಳಬೇಕೆಂದರು.ಆರ್ಯವೈಶ್ಯ ಸಂಘದ ಅಧ್ಯಕ್ಷ ಎಲ್.ಈ.ಶ್ರೀನಿವಾಸಬಾಬು ಮಾತನಾಡಿ ಪ್ರತಿ ಶಾಲೆ ಹಾಗೂ ಊರುಗಳಲ್ಲಿ ಈ ರೀತಿಯ ಕನ್ನಡ ಹಬ್ಬವನ್ನು ಆಚರಿಸಿದಾಗ ಪ್ರತಿಯೊಬ್ಬರಲ್ಲಿಯೂ ಕನ್ನಡದ ಬಗ್ಗೆ ಅಭಿಮಾನ ಮೂಡಿಸಿದಂತಾಗುತ್ತದೆ. ಪ್ರಕೃತಿ ಶಾಲೆ ವಿಶೇಷ ಹಬ್ಬ ಆಚರಿಸುತ್ತಿರುವುದು ನಮಗೆಲ್ಲಾ ಸಂತೋಷ ತಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಪ್ರಕೃತಿ ಶಾಲೆ ಅಧ್ಯಕ್ಷ ರೊ.ಎಂ.ಕೆ.ರವೀಂದ್ರ ಅಧ್ಯಕ್ಷತೆ ವಹಿಸಿದ್ದರು.ಶಾಲೆಯ ಕಾರ್ಯದರ್ಶಿ ಎಂ.ಕಾರ್ತಿಕ್, ಡಾ.ಮಧುಸೂದನ್‌ರೆಡ್ಡಿ, ಮಾರುತಿ ಮೋಹನ್, ವೇದಾ ರವೀಂದ್ರ, ಶ್ವೇತಾ ಎಸ್.ಕಾರ್ತಿಕ್, ಸ್ವಾತಿ ಆನಂದ್, ಉಮೇಶ್ ವಿ.ತುಪ್ಪದ್‌ರೋಟರಿ ಕ್ಲಬ್ ಅಧ್ಯಕ್ಷ ಚೇತನ್‌ಬಾಬು, ಕಾರ್ಯದರ್ಶಿ ರಾಜ್‌ಕುಮಾರ್, ನಿಕಟಪೂರ್ವ ಅಧ್ಯಕ್ಷ ಎಂ.ಗಿರೀಶ್, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ರಾಮಲಿಂಗಶೆಟ್ಟಿ, ಆವೋಪ ಅಧ್ಯಕ್ಷ ಪಿ.ಎಲ್.ಸುರೇಶ್‌ರಾಜು, ಆರ್ಯವೈಶ್ಯ ಹಾಸ್ಟೆಲ್ ಅಧ್ಯಕ್ಷ ಮೋಹನ್‌ಕುಮಾರ್‌ಗುಪ್ತ, ವಾಸವಿ ಶಾಲೆ ಕಾರ್ಯದರ್ಶಿ ಅಜಯ್‌ಕುಮಾರ್‌ಆರ್ಯವೈಶ್ಯ ಸಂಘದ ಕಾರ್ಯದರ್ಶಿ ಸುನಿಲ್, ವಾಸವಿ ಕ್ಲಬ್ ಅಧ್ಯಕ್ಷ ಕೋಟೇಶ್ವರಗುಪ್ತ, ಸಿ.ಆರ್.ಪಿ.ರವಿಶಂಕರ್, ಶಾಲೆಯ ಮುಖ್ಯ ಶಿಕ್ಷಕಿ ಶಶಿಕಲಾ, ಶಿಕ್ಷಕ ವೃಂದದವರು ಹಾಗೂ ವಾಸವಿ ಮಹಿಳಾ ಸಂಘದವರು ಪ್ರಕೃತಿ ಹಬ್ಬದಲ್ಲಿ ಪಾಲ್ಗೊಂಡಿದ್ದರು.ಕನ್ನಡಮ್ಮನ ತೇರು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

### ಶಸ್ತ್ರಾಸ್ತ್ರಗಳನ್ನು ಪೊಲೀಸ್ ಠಾಣೆಗೆ ಒಪ್ಪಿಸಲು ಡಿಸಿ ಆದೇಶ

» ಚಿತ್ರದುರ್ಗ



ಜಿಲ್ಲೆಯ ಗ್ರಾಮ ಪಂಚಾಯಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಖಾಲಿ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ-2024ರ ಸಂಬಂಧ ಚಿತ್ರದುರ್ಗ ನಗರಸಭೆ, ಚಳ್ಳಕೆರೆ ನಗರಸಭೆ ಹಾಗೂ ನಾಯಕನಹಟ್ಟಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ ಬಂದೂಕು ಪರವಾನಗಿ ಪಡೆದಿರುವ ನಾಗರೀಕರ ಬಳಿಯಲ್ಲಿರುವ ಗನ್ ಪಿಸ್ತೂಲ್ ಇತ್ಯಾದಿ ಶಸ್ತ್ರಾಸ್ತ್ರಗಳನ್ನು ಪೊಲೀಸ್ ಠಾಣೆಗೆ ಒಪ್ಪಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ರಾಜಕೀಯ ಚಟುವಟಿಕೆಗಳು ಆರಂಭವಾಗುವ ಹಿನ್ನಲೆಯಲ್ಲಿ ಚುನಾವಣೆಯನ್ನು ಸುಸೂತ್ರವಾಗಿ ನಡೆಸಲು ಮತ್ತು ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಬಂದೂಕು ಪರವಾನಗಿ ಪಡೆದಿರುವ ನಾಗರೀಕರು ತಮ್ಮ ಬಳಿ ಇರುವ ಎಸ್‌ಬಿಎಂಎಲ್, ಎಸ್‌ಬಿಬಿಎಲ್, ಡಿಬಿಬಿಎಲ್, ಡಿಬಿಎಂಎಲ್, ರಿವಾಲ್ವರ್ ಹಾಗೂ ಪಿಸ್ತೂಲ್ ಎಲ್ಲಾ ಇತ್ಯಾದಿ ಶಸ್ತ್ರಾಸ್ತ್ರಗಳನ್ನು ಆರ್ಮ್ಸ್ ಕಾಯ್ದೆ-1959ರ ಕಲಂ 24ಎ ಮತ್ತು 24ಬಿ ರಡಿಯಲ್ಲಿರುವಂತೆ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಯಲ್ಲಿರುವ ಅಧಿಕಾರಿಗಳ ವಶಕ್ಕೆ ಕೂಡಲೇ ಒಪ್ಪಿಸಬೇಕು. ಈ ಆದೇಶವು ಬ್ಯಾಂಕ್, ಕೇಂದ್ರ ಹಾಗೂ ರಾಜ್ಯ ಸರ್ಕಾರಿ ಒಡೆತನದ ಸಂಸ್ಥೆಗಳ ಶಸ್ತ್ರಾಸ್ತ್ರಗಳಿಗೆ ಅನ್ವಯಿಸುವುದಿಲ್ಲ. ವಿನಾಯಿತಿಗೆ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಸ್ಕ್ರೀನಿಂಗ್ ಕಮಿಟಿಯಲ್ಲಿ ಪರಿಶೀಲಿಸಿ, ನಿಯಮಾನುಸಾರ ವಿನಾಯಿತಿ ನೀಡಲು ಕ್ರಮವಹಿಸಲಾಗುವುದು.ಶಸ್ತ್ರಾಸ್ತ್ರಗಳನ್ನು ತಂದಿರಿಸಿದ ಪರವಾನಗಿ ದಾರರಿಗೆ ಸೂಕ್ತ ರಶೀದಿ ನೀಡಬೇಕು. ಈ ಆದೇಶವು ನೀತಿ ಸಂಹಿತೆ ಮುಕ್ತಾಯವಾಗುವವರೆಗೆ ಮಾತ್ರ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### 357ನೇ ಕನಕಜಯಂತಿ ಆಚರಣೆಗೆ ಸರ್ವಸಿದ್ದತೆ

# ಕಾರ್ಯಕ್ರಮ ಯಶಸ್ವಿಗೆ ಸಮುದಾಯ ಕೈಜೋಡಿಸಲು ಮನವಿ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಭಕ್ತಕನಕ ದಾಸರಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ತಾಲ್ಲೂಕು ಕುರುಬ ಸಮಾಜ ನಿರ್ಧರಿಸಿದ್ದು, ಕನಕ ಜಯಂತಿ ಕಾರ್ಯಕ್ರಮಕ್ಕೆ ತಾಲ್ಲೂಕಿನಾದ್ಯಂತ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಮಾಜ ಹಾಗೂ ಸಂಘಟನೆಗೆ ಶಕ್ತಿ ತುಂಬಬೇಕೆಂದು ರೇವಣಸಿದ್ದೇಶ್ವರವಿದ್ಯಾವರ್ಧಕ ಸಂಘದ ತಾಲ್ಲೂಕು ಅಧ್ಯಕ್ಷ, ಹಿರಿಯ ಸಹಕಾರಿ ದುರೀಣ ಆರ್.ಮಲ್ಲೇಶಪ್ಪ ತಿಳಿಸಿದರು.

ಅವರು, ನಗರದ ಕುರುಬರ ಹಾಸ್ಟಲ್ ಆವರಣದಲ್ಲಿ ಕನಕ ಜಯಂತಿ ಹಿನ್ನೆಲೆಯಲ್ಲಿ ಹಮ್ಮಿಕೊಳ್ಳುವ ಕಾರ್ಯಕ್ರಮದ ಬಗ್ಗೆ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು. ನ.18ರ ಸೋಮವಾರ ಜಯಂತಿ ಕುರುಬರ ಹಾಸ್ಟಲ್ ಆವರಣದಲ್ಲಿ ಹಮ್ಮಿಕೊಂಡಿದ್ದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆ ವಹಿಸುವರು. ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಸಮಿತಿ ಹಾಗೂ ಕುರುಬ ಸಮಾಜದ ವಿವಿಧ



ಸಂಘಟನೆಗಳ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಲಿದೆ. ಗ್ರಾಮೀಣ ಭಾಗದಲ್ಲಿ ಕನಕ ಜಯಂತಿ ಆಚರಿಸುವ ಸಮಾಜದ ಬಂಧುಗಳು ನ.18ರ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ನಂತರ ತಮ್ಮ ಗ್ರಾಮದಲ್ಲಿ ಕನಕಜಯಂತಿ ಆಚರಿಸುವಂತೆ ಅವರು ಮನವಿ ಮಾಡಿದ್ದಾರೆ.

ತಾಲ್ಲೂಕು ಹಾಲುಮತ ಮಹಾಸಭಾದ ಅಧ್ಯಕ್ಷ, ನಗರಸಭಾ ಸದಸ್ಯ ಎಂ.ಜೆ.ರಾಘವೇಂದ್ರ ಮಾತನಾಡಿ, ನ.18ರ ಸೋಮವಾರ ಬೆಳಗ್ಗೆ 9 ಗಂಟೆಗೆ ಕನಕ ವೃತ್ತದಿಂದ ಮೆರವಣಿಗೆಯನ್ನು ಪ್ರಾರಂಭಿಸಲಾಗುವುದು. ವಾಲ್ಮೀಕಿ, ಅಂಬೇಡ್ಕರ್, ನೆಹರೂ ವೃತ್ತದ ಮೂಲಕ ಕುರುಬರಹಾಸ್ಟಲ್‌ಗೆ ವಾಪಾಸ್‌ಬಂದು ಸಭೆಯ ಕಾರ್ಯಕಲಾಪ ನಡೆಯಲಿದೆ. ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜಬಂಧುಗಳು ಕಾರ್ಯಕ್ರಮಕ್ಕೆ ಸಹಕರಿಸುವಂತೆ ಮನವಿ ಮಾಡಲಾಗಿದೆ. ಸಮುದಾಯದ ಎಲ್ಲಾ ಮುಖಂಡರು ಜಯಂತಿ ಯಶಸ್ವಿಗೆ ಕೈಜೋಡಿಸುವಂತೆ ವಿನಂತಿಸಿದೆ. ವಿಶೇಷವಾಗಿ ಈ ಬಾರಿ ಕನಕ ಜಯಂತಿಯಂದು ಸಮಾಜದ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಐವರು ಗಣ್ಯರು, ಸಮುದಾಯದ ಐವರು ಸಾಧಕರು ಹಾಗೂ ಪ್ರತಿಭಾಪುರಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲಾಸುರೇಶ್‌ಬಾಬು ಮಾತನಾಡಿ, ಪ್ರಸ್ತುತ 537ನೇ ಜಯಂತಿಯನ್ನು ಆಚರಿಸಲಾಗುತ್ತಿದೆ. ಕನಕದಾಸರ ಅಪ್ರತಿಮಸಾಧನೆಗಳ ಬಗ್ಗೆ ಇನ್ನೂ ಹೆಚ್ಚು ತಿಳಿಯುವ ಅವಶ್ಯಕತೆ ಇದೆ. ವಿಶೇಷವಾಗಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮ ಯಶಸ್ವಿಗೆ ಸಹಕರಿಸಿ. ಕನಕಜಯಂತಿ ಕೇವಲ ಸಮುದಾಯಕ್ಕೆ ಮಾತ್ರ ಸೀಮಿತವಲ್ಲ, ಕನಕದಾಸರು ಸಮಾಜದ ಎಲ್ಲಾ ವರ್ಗದ ಹಿತಕ್ಕಾಗಿ ಶ್ರಮಿಸಿದವರು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಉಣ್ಣೆ ಕಂಬಳಿ ಮಾರುಕಟ್ಟೆ ಮಾಜಿ ಅಧ್ಯಕ್ಷ ಸೂರನಹಳ್ಳಿಜಗದೀಶ್, ನಿವೃತ್ತ ಪ್ರಾಂಶುಪಾಲ ಪ್ರೊ.ಸಿ.ಶಿವಲಿಂಗಪ್ಪ, ಯುವ ಘಟಕದ ಅಧ್ಯಕ್ಷ ಭೀಮಣ್ಣ, ಚೌಳೂರು ಬಸವರಾಜು ಇದ್ದರು.

## ಫಾಸ್ಟ್ ನ್ಯೂಸ್

### ಹಿರಿಯೂರಿನ ರೋಟರಿ ಭವನದಲ್ಲಿ ರಾಜ್ಯೋತ್ಸವ

» **ಚಿತ್ರದುರ್ಗ**

ನಟ ದಿವಂಗತ ಶಂಕರ್‌ನಾಗ್ ಅಭಿಮಾನಿಗಳ ಕಲಾ ವೇದಿಕೆಯಿಂದ ಹಿರಿಯೂರಿನ ರೋಟರಿ ಭವನದಲ್ಲಿ ನ.9 ರ ಇಂದು ನಡೆಯುವ 69 ನೇ ಕನ್ನಡ ರಾಜ್ಯೋತ್ಸವ ಹಾಗೂ ಶಂಕರ್‌ನಾಗ್‌ರವರ 70 ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದವರನ್ನು ಗುರುತಿಸಿ ರಾಜ್ಯ ಮಟ್ಟದ ಕರುನಾಡ ಕಲಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಕೆ.ಕೆ.ಎಸ್.ಎಸ್.ಎಸ್. ಜಿಲ್ಲಾ ಸಮಿತಿ ಅಧ್ಯಕ್ಷ ಕೊಳಗೇರಿ ನಿವಾಸಿಗಳ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಹಲವಾರು ವರ್ಷಗಳಿಂದಲೂ ಹೋರಾಟದಲ್ಲಿ ತೊಡಗಿರುವ ಚಿತ್ರದುರ್ಗದ ಗಣೇಶ್ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಅತ್ತಿಗೆರೆ ವಿದ್ಯುತ್ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ, ನವಂಬರ್ 10 ಮತ್ತು 11 ರಂದು ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ಅತ್ತಿಗೆರೆ ವಿದ್ಯುತ್ ವಿತರಣಾ ಕೇಂದ್ರಗಳಿಂದ ಸರಬರಾಜಾಗುವ 11ಕೆ.ವಿ. ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಅತ್ತಿಗೆರೆ, ಕುರ್ಕಿ, ಬಾಡ, ಕಬ್ಬೂರು, ಹೀರೆತೊಗಲೇರಿ, ಗೋಪನಾಳು, ಕಂದ್ಗಲ್, ರಾಮಗೊಂಡನಹಳ್ಳಿ, ಕಾಶೀಪುರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

**ವಿದ್ಯುತ್ ವ್ಯತ್ಯಯ:** ಎಲೇಬೇತೂರು ಶಾಖಾ ವ್ಯಾಪ್ತಿಯ ಯರಗುಂಟೆ ವಿ.ವಿ ಕೇಂದ್ರದಿಂದ ಹೊರಡುವ ಚಿತ್ರಾನಹಳ್ಳಿ, ದೇವರಹಟ್ಟಿ ಅಮೃತನಗರ, ಮಾರ್ಗದಲ್ಲಿ ನವಂಬರ್ 10 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ದೊಡ್ಡಬೂದಿಹಾಳು, ಚಿಕ್ಕಬೂದಿಹಾಳು, ದೇವರಹಟ್ಟಿ, ಬಿ.ಕಲ್ಪನಹಳ್ಳಿ, ಚಿತ್ರಾನಹಳ್ಳಿ, ಅಮೃತನಗರ ಮತ್ತು ಸುತ್ತಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ತಾತ್ಕಾಲಿಕ ಅತಿಥಿ ಶಿಕ್ಷಕರ ನೇಮಕ್ಕೆ ಅರ್ಜಿ ಆಹ್ವಾನ

» **ದಾವಣಗೆರೆ**

ದಾವಣಗೆರೆ ಜಿಲ್ಲೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿಗೆ ಹೊಸದಾಗಿ ಮಂಜೂರಾಗಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆ ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಆಂಗ್ಲ ಮಾಧ್ಯಮದಲ್ಲಿ ಭೋಧಿಸಲು ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ನವಂಬರ್ 14 ರೊಳಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದಾವಣಗೆರೆ ಇಲ್ಲಿಗೆ ಅರ್ಜಿಗಳನ್ನು ಸಲ್ಲಿಸಬಹುದು. ಚನ್ನಗಿರಿ ತಾಲ್ಲೂಕಿನ ಬಸವಪಟ್ಟಣ ಗ್ರಾಮದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಕನ್ನಡ ಶಿಕ್ಷಕರು, ವಿದ್ಯಾರ್ಹತೆ ಬಿ.ಎ, ಬಿ.ಇಡಿ, ಹುದ್ದೆ ಸಂಖ್ಯೆ-4, ದಾವಣಗೆರೆಯ ವಿನೋಬನಗರದ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿಶಾಲೆಗೆ ಇಂಗ್ಲೀಷ್ ಶಿಕ್ಷಕರು, ಸಮಾಜ ವಿಜ್ಞಾನ ಶಿಕ್ಷಕರು ವಿದ್ಯಾರ್ಹತೆ ಬಿ.ಎ, ಬಿ.ಇಡಿ, ಹುದ್ದೆ ಸಂ: 4, ದಾವಣಗೆರೆಯ ಬಿನ್.ಎನ್ ಲೇಔಟ್‌ನ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆಗೆ ಗಣಿತ ಶಿಕ್ಷಕರು, ಸಾಮಾನ್ಯ ವಿಜ್ಞಾನ ಶಿಕ್ಷಕರು ವಿದ್ಯಾರ್ಹತೆ ಬಿ.ಎಸ್ಸಿ, ಬಿ.ಇಡಿ ಹುದ್ದೆ ಸಂ: 4, ದಾವಣಗೆರೆಯ , ಕೆ.ಟಿ.ಜೆ ನಗರದ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿಶಾಲೆಗೆ ಉರ್ದು ಶಿಕ್ಷಕರು ವಿದ್ಯಾರ್ಹತೆ ಬಿ. ಎ, ಬಿ.ಇಡಿ, ಹುದ್ದೆ ಸಂ:3 ಮತ್ತು ಹಿಂದಿ ಶಿಕ್ಷಕರು ವಿದ್ಯಾರ್ಹತೆ ಬಿ.ಎ, ಬಿ.ಇಡಿ ಹುದ್ದೆ ಸಂ: 1 ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192-250022 ನ್ನು ಸಂಪರ್ಕಿಸಲು ತಿಳಿಸಲಾಗಿದೆ.

### ವೀರ ಓನಕೆ ಓಬವ್ವ ಜಯಂತಿ ನ.11ರಂದು

» **ಚಳ್ಳಕೆರೆ**

ಐತಿಹಾಸಿಕ ಏಳುಸುತ್ತಿನ ಭದ್ರಕೋಟೆಯಾದ ಚಿತ್ರದುರ್ಗದ ಕೋಟೆ ರಕ್ಷಿಸುವ ಮೂಲಕ ಇತಿಹಾಸ ನಿರ್ಮಿಸಿದ ವೀರ ಒನಕೆಓಬವ್ವ ಜಯಂತಿಯನ್ನು ನ.11ರ ಸೋಮವಾರ ಬೆಳಗ್ಗೆ 11ಕ್ಕೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆಸಲಾಗುವುದು ಎಂದು ಓನಕೆ ಒಬವ್ವ ಉತ್ಸವ ಆಚರಣಾ ಸಮಿತಿ ಗೌರವಾಧ್ಯಕ್ಷ ಸಿದ್ದಾಪುರದ ಹನುಮಂತಪ್ಪ ತಿಳಿಸಿದರು.

ಅವರು, ಪತ್ರಿಕೆಗೆ ಮಾಹಿತಿ ನೀಡಿ, ತಾಲ್ಲೂಕು ಛಲವಾದ ಕ್ಷೇಮಾಭಿವೃದ್ಧಿ ಸಂಘ, ಓಬವ್ವ ಯುವ ಸೇನೆ, ಛಲವಾದಿ ಮಹಾಸಭಾ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಮಾಜಿ ರಾಜ್ಯಸಭಾ ಸದಸ್ಯ ಎಚ್.ಹನುಮಂತಪ್ಪ ಚಿತ್ರದುರ್ಗದ ಛಲವಾದಿ ಗುರುಪೀಠದ ಬಸವನಾಗಿದೇವಮಹಾಸ್ವಾಮಿ, ಶ್ರೀ ವ ಂ ತ ಸಿ ದ್ಧ ಂ ಯ್ಯ ನ ಕೋಟೆ ಂ ು ಬಸವಲಿಂಗಾನಂದಸ್ವಾಮೀಜಿ ದಿವ್ಯಸಾನಿಧ್ಯ ವಹಿಸುವರು.

# ಯುವಕರಲ್ಲಿ ಸಾಮಾಜಿಕ ಜಾಲತಾಣಗಳ ಕ್ರೇಜ್



ಯುವಕರಲ್ಲಿ ಸಾಮಾಜಿಕ ಜಾಲತಾಣಗಳ ಕ್ರೇಜ್ ಜಾಸ್ತಿ. ಆದಾಗ್ಯೂ, ಇದರ ಅತಿಯಾದ ಬಳಕೆಯು ಯುವಕರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಯುವಕರ ಮೇಲೆ ಸಾಮಾಜಿಕ ಮಾಧ್ಯಮದ ಪ್ರಭಾವದ ಬಗ್ಗೆ ಸಂಶೋಧನೆ ನಡೆಸಲಾಯಿತು. ಸಾಮಾಜಿಕ ಮಾಧ್ಯಮಗಳು ವಿವಿಧ ವಯಸ್ಸಿನ ಹುಡುಗರು ಮತ್ತು ಹುಡುಗಿಯರ ಮೇಲೆ ಪರಿಣಾಮ ಬೀರಬಹುದು ಎಂದು ಅದು ತೋರಿಸಿದೆ.ಚಿಕ್ಕ ವಯಸ್ಸಿನಲ್ಲಿ ಹೆಚ್ಚು ಪರಿಣಾಮ ಬೀರುತ್ತದೆ

'ದಿ ಗಾರ್ಡಿಯನ್' ವರದಿ ಮಾಡಿದಂತೆ, ಸಂಶೋಧನೆಯಲ್ಲಿ ಮನೋವಿಜ್ಞಾನಿಗಳು 11 ರಿಂದ 13 ವರ್ಷದೊಳಗಿನ ಸಾಮಾಜಿಕ ಮಾಧ್ಯಮದಲ್ಲಿ ಹೆಚ್ಚು ಸಮಯ ಕಳೆಯುವ ಹುಡುಗಿಯರು ಒಂದು ವರ್ಷದ ನಂತರ ತಮ್ಮ ಜೀವನದಲ್ಲಿ ಕಡಿಮೆ ತೃಪ್ತಿ ಹೊಂದಿದ್ದಾರೆಂದು ಕಂಡುಹಿಡಿದಿದ್ದಾರೆ. ಅದೇ ಸಮಯದಲ್ಲಿ, ಹುಡುಗರಲ್ಲಿ ಸಾಮಾಜಿಕ ಮಾಧ್ಯಮದ ಈ ಪರಿಣಾಮವು 14 ಮತ್ತು 15 ವರ್ಷಗಳ ನಡುವೆ ಇತ್ತು. ಇತರ ವಯಸ್ಸಿನ ಸಾಮಾಜಿಕ ಮಾಧ್ಯಮದ ಪರಿಣಾಮಗಳ ನಡುವೆ ಯಾವುದೇ ಸಂಬಂಧವನ್ನು ಸಂಶೋಧಕರು ಕಂಡುಕೊಂಡಿಲ್ಲ. ಆದಾಗ್ಯೂ, 19 ನೇ ವಯಸ್ಸಿನಲ್ಲಿ, ಹುಡುಗರು ಮತ್ತು ಹುಡುಗಿಯರ ತೃಪ್ತಿಯಲ್ಲಿ ಕುಸಿತ ಕಂಡುಬಂದಿದೆ.

### ಪ್ರತಿ ತರಗತಿಯಲ್ಲಿ 5 ಮಕ್ಕಳು ಬಾಧಿತರಾಗುತ್ತಾರೆ.

ಕೇಂಬ್ರಿಡ್ಜ್ ವಿಶ್ವವಿದ್ಯಾನಿಲಯದ ಸಂಶೋಧನೆಯ ಲೇಖಕಿ ಮತ್ತು ಮನಶ್ಶಾಸ್ತ್ರಜ್ಞ ಡಾ. ಆಮಿ ಓರ್ಬೆನ್, ಹುಡುಗರು ಮತ್ತು ಹುಡುಗಿಯರು ಸಾಮಾಜಿಕ ಮಾಧ್ಯಮವು ಅವರ ಜೀವನದ ಮೇಲೆ ಪರಿಣಾಮ ಬೀರುವ ನಿರ್ದಿಷ್ಟ ವಯಸ್ಸನ್ನು ಹೊಂದಿರುತ್ತಾರೆ ಎಂದು ಹೇಳಿದರು. ಸಾಮಾಜಿಕ ಮಾಧ್ಯಮವು ಯುವಜನರಲ್ಲಿ ಮಾನಸಿಕ ಆರೋಗ್ಯ ಸಮಸ್ಯೆಗಳ ಮಟ್ಟವನ್ನು ಹೆಚ್ಚಿಸುತ್ತದೆಯೇ ಎಂಬುದರ ಬಗ್ಗೆ ಸಂಶೋಧಕರು ಕೆಲಸ ಮಾಡಲು ಪ್ರಾರಂಭಿಸಿದರು. ಯಂಗ್ ಮೈಂಡ್ಸ್ ಚಾರಿಟಿ ಪ್ರಕಾರ, 2017 ಮತ್ತು 2021 ರ ನಡುವೆ ಮಾನಸಿಕ ಆರೋಗ್ಯ ಸಮಸ್ಯೆಗಳೊಂದಿಗೆ 5 ರಿಂದ 16 ವರ್ಷ ವಯಸ್ಸಿನ ಮಕ್ಕಳ ಸಂಖ್ಯೆ 50% ಹೆಚ್ಚಾಗಿದೆ. ಅದರ ಪ್ರಕಾರ, ಪ್ರತಿ ತರಗತಿಯ ಸುಮಾರು 5 ಮಕ್ಕಳು ಈಗ ಈ ಸಮಸ್ಯೆಯಿಂದ ಬಳಲುತ್ತಿದ್ದಾರೆ.

### 84 ಸಾವಿರ ಜನರ ಮೇಲೆ ಸಂಶೋಧನೆ

ಡಾ.ಆಮಿಓರ್ಬೆನ್‌ಮತ್ತುಅವರಸಹೋದ್ಯೋಗಿಗಳು 10 ರಿಂದ 80 ವರ್ಷ ವಯಸ್ಸಿನ 84,000 ಬ್ರಿಟಿಷ್ ಜನರ ಡೇಟಾವನ್ನು ವಿಶ್ಲೇಷಿಸಿದ್ದಾರೆ. ಸಾಮಾಜಿಕ ಮಾಧ್ಯಮಗಳ ಬಳಕೆಯಿಂದ ಅವರ ಮಾನಸಿಕ ಆರೋಗ್ಯದ ಮೇಲೆ ಪರಿಣಾಮ ಬೀರಿದೆ ಎಂದು ಇದು ತೋರಿಸಿದೆ. ನೇಚರ್ ಕಮ್ಯುನಿಕೇಷನ್ಸ್‌ನಲ್ಲಿ ಪ್ರಕಟವಾದ ಸಂಶೋಧನೆಯು ಸಾಮಾಜಿಕ ಮಾಧ್ಯಮವು ಆರೋಗ್ಯಕ್ಕೆ ಹಾನಿ ಮಾಡುತ್ತದೆ ಎಂದು ಸಾಬೀತುಪಡಿಸುವುದಿಲ್ಲ, ಆದರೆ ಇದು ವಿಭಿನ್ನ ವಯಸ್ಸಿನ ಹುಡುಗರು ಮತ್ತು ಹುಡುಗಿಯರ ಮೇಲೆ ಸ್ವಲ್ಪ ಮಟ್ಟಿಗೆ ಪರಿಣಾಮ ಬೀರಬಹುದು ಎಂದು ಸಂಶೋಧಕರು ಶಂಕಿಸಿದ್ದಾರೆ.

### ಖಿನ್ನತೆಗೆ ಬಲಿಯಾದ

ಸೋಷಿಯಲ್ ಮೀಡಿಯಾದಲ್ಲಿ ಹೆಚ್ಚು ಸಮಯ ಕಳೆಯುವುದರಿಂದ ಹುಡುಗಿಯರಲ್ಲಿ ಖಿನ್ನತೆಯ ಸಮಸ್ಯೆ ಹೆಚ್ಚಾಗಿದೆ ಎಂದು ಸಂಶೋಧನೆಯ ಫಲಿತಾಂಶಗಳು ತೋರಿಸಿವೆ ಎಂದು ವಿಜ್ಞಾನಿ ಪ್ರೊಫೆಸರ್ ಯವೊನ್ ಕೆಲ್ಲಿ ಹೇಳುತ್ತಾರೆ. ಇದರೊಂದಿಗೆನಿದ್ದೆಗೂ ತೊಂದರೆಯಾಗತೊಡಗಿತು. ಆದರೆ, ಸೋಶಿಯಲ್ ಮೀಡಿಯಾದಲ್ಲಿ ಕಳೆಯುವ ಸಮಯ ಯುವಕರ ಮೇಲೆ ಎಷ್ಟು ಕೆಟ್ಟ ಪರಿಣಾಮ ಬೀರುತ್ತದೆ ಎಂದು ತಿಳಿಯುವುದು ಕಷ್ಟ.ಚಿಕ್ಕ ವಯಸ್ಸಿನಲ್ಲಿಯೇ ವಿವರಿಸುವುದು ಮುಖ್ಯ.ಕೇಂಬ್ರಿಡ್ಜ್ ವಿಶ್ವವಿದ್ಯಾನಿಲಯದ ಮನಃಶಾಸ್ತ್ರಜ್ಞೆ ಮತ್ತು ಮನಶ್ಶಾಸ್ತ್ರಜ್ಞೆ ಸಾರಾ-ಜೇನ್ ಬ್ಲೇಕ್ಮೋರ್, ಮಕ್ಕಳು ಸಾಮಾಜಿಕ ಮಾಧ್ಯಮಗಳನ್ನು ಬಳಸುವಾಗ ಅವರು ನಿದ್ರೆಯನ್ನು ಕಳೆದುಕೊಳ್ಳದಂತೆ ನಿಯಮಗಳನ್ನು ರಚಿಸುವುದು ಸುಲಭ ಎಂದು ಹೇಳುತ್ತಾರೆ. ಇದಕ್ಕಾಗಿ, ಚಿಕ್ಕ ವಯಸ್ಸಿನಿಂದಲೇ ಮಕ್ಕಳಿಗೆ ಸಾಮಾಜಿಕ ಮಾಧ್ಯಮದ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆ. ಗ್ಲಾಸ್ಗೋ ವಿಶ್ವವಿದ್ಯಾಲಯದ ಮನಶ್ಶಾಸ್ತ್ರಜ್ಞ ಡಾ.ಹಾಲಿ ಸ್ಕಾಟ್ ಮಾತನಾಡಿ, ಈ ಸಂಶೋಧನೆಯು ಹುಡುಗರು ಮತ್ತು ಹುಡುಗಿಯರು ಸಾಮಾಜಿಕ ಮಾಧ್ಯಮದಲ್ಲಿ ವಿಭಿನ್ನ ವಯಸ್ಸಿನ ಕೆಟ್ಟ ಪರಿಣಾಮಗಳನ್ನು ಹೊಂದಿದ್ದಾರೆ ಎಂಬುದಕ್ಕೆ ಹೊಸ ಪುರಾವೆಗಳನ್ನು ನೀಡಿದೆ ಎಂದು ಹೇಳಿದರು. ಸಾಮಾಜಿಕ ಮಾಧ್ಯಮವು ಹುಡುಗರಿಗಿಂತ ಹುಡುಗಿಯರ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ ಎಂದು ಅವರು ಹೇಳಿದರು. (ಸಂಗ್ರಹ)



ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ಆರಂಭಗೊಂಡಿರುವ ಸಾಂಸ್ಕೃತಿಕ ಚಟುವಟಿಕೆ ಹಾಗೂ ಕ್ರೀಡಾಕೂಟಕ್ಕೆ ಡಾ.ಅನಂತರಾಮು ಚಾಲನೆ.

### ಮತದಾರರ ವಿಶೇಷ ಪರಿಷ್ಕರಣೆ: ಅಧಿಕಾರಿಗಳಿಗೆ ನಿರ್ದೇಶನ

**ಚಳ್ಳಕೆರೆ:** ಪ್ರತಿವರ್ಷ ನವೆಂಬರ್ ತಿಂಗಳಲ್ಲಿ ಸಮಗ್ರಮತದಾರರ ಪಟ್ಟಿಯನ್ನು ಅವಲೋಕಿಸಿ ಸಣ್ಣಪುಟ್ಟದೋಷಗಳಿದ್ದಲ್ಲಿಅವುಗಳತಿದ್ದುಪಡಿಯನ್ನು ಮಾಡುವ ಮೂಲಕ ಮತದಾರರ ಪಟ್ಟಿಯನ್ನು ಆಕ್ರೈರುಗೊಳಿಸಲು ಮತಗಟ್ಟೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು ಎಂದು ಚುನಾವಣಾ ಶಿರಸ್ತೇದಾರ್ ಹಸೀನಭಾನು ತಿಳಿಸಿದರು.



ಅವರು, ಶುಕ್ರವಾರ ತಾಲ್ಲೂಕು ಕಚೇರಿಯ ಚುನಾವಣಾ ಶಾಲೆಯಲ್ಲಿ ತಹಶೀಲ್ದಾರ್ ರೇಹಾನ್‌ಪಾಷ ಮಾರ್ಗದರ್ಶನದಂತೆ ಮತಗಟ್ಟೆ ಅಧಿಕಾರಿಗಳ ಸಭೆಯನ್ನು ನಡೆಸಿ ಸಲಹೆ, ಸೂಚನೆಗಳನ್ನು ನೀಡಲಾಯಿತು. ವಿಶೇಷವಾಗಿ ಮತದಾರರ ಪಟ್ಟಿ ಸೇರ್ಪಡೆ, ಡಿಲಿಟ್, ಆಕ್ಷೇಪಣೆ ಮತ್ತು ಹೆಸರು, ವಿಳಾಸ ಬದಲಾವನೆ ಮುಂತಾದ ಮಾಹಿತಿಯನ್ನು ಅರ್ಜಿ ಸಂಖ್ಯೆ 6,7,8ರಲ್ಲಿ ಪಡೆದು ಪಟ್ಟಿಯಲ್ಲಿರುವ ನ್ಯೂತನತೆಗಳನ್ನು ಸರಿಪಡಿಸಲಾಗುವುದು. ನವೆಂಬರ್ 1ರಿಂದ 30ವರೆಗೂ ಈ ಕಾರ್ಯದಲ್ಲಿ ಭಾಗವಹಿಸುವಂತೆ ಮತಗಟ್ಟೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

## ಪ್ರಮುಖ ಸುದ್ದಿ

### ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥಿನಿಲಯ

# ಕುಡಿದುಬಂದ ವಾರ್ಡ್‌ನ್ ವಿರುದ್ದ ವಿದ್ಯಾರ್ಥಿಗಳ ಆಕ್ರೋಶ

» **ಚಳ್ಳಕೆರೆ**

ನಗರದ ಚಿತ್ರದುರ್ಗ ರಸ್ತೆಯ ಕುರುಬರ ಹಾಸ್ಟಲ್‌ನಲ್ಲಿರುವ ಡಿ.ದೇವರಾಜ ಅರಸು ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ನೂರಾರು ವಿದ್ಯಾರ್ಥಿಗಳು ಹಾಸ್ಟಲ್ ವಾರ್ಡ್‌ನ್ ಕುಡಿದುಬಂದು ದುರ್ವನೆ ತೋರುತ್ತಾನೆಂದು ಆರೋಪಿಸಿ ತನ್ನ ಲಗೇಜುಗಳೊಂದಿಗೆ ಹಾಸ್ಟಲ್‌ನಿಂದ ಹೊರಗೆ ಬಂದು ಕೊರೆಯುವ ಚಳಿಯಲ್ಲೂ ವಾರ್ಡ್‌ನ್ನ ವಿರುದ್ದ ಪ್ರತಿಭಟನೆ ನಡೆಸಿದರು.



ವಿದ್ಯಾರ್ಥಿಗಳು ಆರೋಪಿಸುವಂತೆ ಪ್ರತಿನಿತ್ಯ ಇತ್ತೀಚೆಗೆ ತಾನೇ ಇಲ್ಲಿನ ಪ್ರಭಾರ ವಾರ್ಡ್‌ನ್ನಾಗಿ ಕರ್ತವ್ಯಕ್ಕೆ ನಿಯುಕ್ತಿಗೊಂಡ ಚಂದ್ರಶೇಖರ್‌ನಾಯ್ಕ ಪ್ರತಿನಿತ್ಯ ರಾತ್ರಿವೇಳೆಯಲ್ಲಿ ಪಾನಮತ್ತನಾಗಿ ಹಾಸ್ಟಲ್‌ಗೆ ಆಗಮಿಸಿ ವಿದ್ಯಾರ್ಥಿಗಳನ್ನು ಮನಬಂದಂತೆ ವಾಮಾಗೋಚರವಾಗಿ ಮಾತನಾಡಿದ್ದಲ್ಲದೆ, ನಾನು ಹೇಳಿದಂತೆ ಎಲ್ಲರೂ ಕೇಳಬೇಕು, ನಾನು ಯಾರಿಗೂ ಕೇರ್‌ಮಾಡಲ್ಲಾ, ನೀವು ಏನಾದರೂ ನನ್ನ ಮೇಲೆ ದೂರು ನೀಡಿದರೆ ಸರಿಯಾಗಿರುವುದಿಲ್ಲವೆಂದು ವಿದ್ಯಾರ್ಥಿಗಳಿಗೆ ಬೆದರಿಕೆ ಹಾಕುತ್ತಾರೆಂದು ವಿದ್ಯಾರ್ಥಿಗಳು ನೋವು ತೋಡಿಕೊಂಡಿದ್ದಾರೆ. ರಾತ್ರಿ ಕತ್ತಲಾದ್ದರಿಂದ ಸ್ವಲ್ಪ ಹೊತ್ತು ಹೊರಗೆ ಇದ್ದು ವಿದ್ಯಾರ್ಥಿಗಳನ್ನು ಅಲ್ಲಿನ ಕೆಲವರು ಸಮದಾನಪಡಿಸಿ ಒಳಗೆ ಕಳಿಸಿದ್ದಾರೆ.

ವಿದ್ಯಾರ್ಥಿಗಳು ಪತ್ರಿಕೆಗೆ ಮಾಹಿತಿ ನೀಡಿ, ವಿದ್ಯಾರ್ಥಿಗಳಿಗೆ ಹಾಸ್ಟಲ್‌ನಲ್ಲಿ ನಿಯಮದ ಪ್ರಕಾರ ನೀಡಬೇಕಾದ ಯಾವುದೇ ಸೌಲಭ್ಯ ನೀಡುತ್ತಿಲ್ಲ. ಯಾವುದೇ ವಿದ್ಯಾರ್ಥಿ ಏನೇ ಕೇಳಿದರೂ ಅವನನ್ನು ವಾರ್ಡ್‌ನ್ ಚಂದ್ರಶೇಖರನಾಯ್ಕ ಮನಬಂದಂತೆ ಬೈಯುತ್ತಾನೆ. ನಾನು ಕೊಡುವುದನ್ನು ಮಾತ್ರ ತೆಗೆದುಕೊಳ್ಳಬೇಕು, ಬೇರೆ ಯಾವುದೇ ರೀತಿಯ ವರ್ತನೆಯನ್ನುನಾನು ಸಹಿಸುವುದಿಲ್ಲ. ಮುಲಾಜಿಲ್ಲದೆ ನಿಮ್ಮನ್ನು ಹಾಸ್ಟಲ್‌ನಿಂದ ಹೊರಹಾಕುತ್ತೇನೆಂದು ಧಮ್ಕಿಹಾಕುತ್ತಾನೆಂದು ಆರೋಪಿಸಿದ್ದಾರೆ.

ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರಿಗೆ ಮಾಹಿತಿ ನೀಡಲು ವಿದ್ಯಾರ್ಥಿಗಳು ಪ್ರಯತ್ನಿಸಿದ್ದಾರೆ. ಆದರೆ, ಶಾಸಕರು ದೂರವಾಣಿಯಲ್ಲಿ ಇವರಿಗೆ ಲಭ್ಯವಾಗಿಲ್ಲ ಎನ್ನಲಾಗಿದೆ. ನೊಂದ ವಿದ್ಯಾರ್ಥಿಗಳು ದಯಮಾಡಿ ಕ್ಷೇತ್ರದ ಶಾಸಕರು ನಮ್ಮ ಹಾಸ್ಟಲ್‌ಗೆ ಭೇಟಿ ನೀಡಿ ನಮ್ಮ ಸಮಸ್ಯೆ ಬಗೆಹರಿಸಬೇಕು ಎಂದು ವಿನಂತಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T